ಸಂಪುಟ : 11 ಸಂಚಿಕೆ: 131 ಪುಟ : 4+2 ಬೆಲೆ: 3.00 ಗುರುವಾರ ಜೂನ್ 25 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 131 Pages : 4+2 Price : 3.00 Thursday june 25 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕರಾವಳಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಣೆ; ಇಂದು ಭಾರಿ ಮಳೆ ಸಾಧ್ಯತೆ?

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕಳೆದ ಕೆಲ ದಿನಗಳಿಂದ ನಿಧಾನಗತಿಯಲ್ಲಿ ಸಾಗುತ್ತಿದ್ದ ನೈಋತ್ಯ ಮುಂಗಾರು ಇದೀಗ ಮತ್ತೆ ಚುರುಕುಗೊಂಡಿದ್ದು, ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಮುಂದಿನ ಕೆಲ ದಿನಗಳ ಕಾಲ ಉತ್ತಮ ಮಳೆಯಾಗುವ ಸಾಧ್ಯತೆ ಇದೆ.

ಹವಾಮಾನ ಇಲಾಖೆಯು ನೀಡಿರುವ ಮುನ್ಸೂಚನೆಯ ಪ್ರಕಾರ, ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇರುವುದರಿಂದ ವಿಶೇಷ ಮುನ್ನೆಚ್ಚರಿಕಾ ಕ್ರಮವಾಗಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಶುಕ್ರವಾರ ಈ ಮೂರು ಜಿಲ್ಲೆಗಳಲ್ಲಿ ಮಳೆಯ ತೀವ್ರತೆ ಹೆಚ್ಚಾಗುವ ನಿರೀಕ್ಷೆ ಇದ್ದು, ಜೂನ್ 27 ಮತ್ತು 28ರವರೆಗೂ ಮಳೆಯ ಅಬ್ಬರ ಮುಂದುವರಿಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಭಾಗದಲ್ಲಿ ವ್ಯಾಪಕ ಮಳೆಯ ಜೊತೆಗೆ ಬಿರುಗಾಳಿ ಸಹ ಬೀಸುವ ಸಾಧ್ಯತೆ ಇರುವುದರಿಂದ ಮೀನುಗಾರರು ಹಾಗೂ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಇನ್ನೊಂದೆಡೆ, ಜೂನ್ 25ರಿಂದ ಮಲೆನಾಡು ಭಾಗದಲ್ಲಿಯೂ ಮುಂಗಾರು ಚಟುವಟಿಕೆ ಮತ್ತಷ್ಟು ಬಲಗೊಳ್ಳಲಿದ್ದು, ಹಲವು ಪ್ರದೇಶಗಳಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆ ಇದೆ. ಇದರಿಂದ ಜಲಾಶಯಗಳಿಗೆ ಒಳಹರಿವು ಹೆಚ್ಚುವ ಸಾಧ್ಯತೆ ಇದ್ದು, ಕೃಷಿ ಚಟುವಟಿಕೆಗಳಿಗೂ ಅನುಕೂಲಕರ ವಾತಾವರಣ ನಿರ್ಮಾಣವಾಗಲಿದೆ.

ಮುಂದಿನ 24 ಗಂಟೆಗಳ ಅವಧಿಯಲ್ಲಿ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಕನ್ನಡ ಜಿಲ್ಲೆಯ ಹಲವೆಡೆ ಗಂಟೆಗೆ 30ರಿಂದ 40 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಜೊತೆಗೆ ಭಾರೀ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿಯೂ ಗಾಳಿ ಸಹಿತ ಸಾಧಾರಣದಿಂದ ಭಾರೀ ಮಳೆಯಾಗುವ ಸಾಧ್ಯತೆ ಇದೆ.

ರಾಜ್ಯದ ಒಳನಾಡು ಭಾಗಗಳಲ್ಲಿಯೂ ಮಳೆಯ ಪ್ರಭಾವ ಕಂಡುಬರುವ ಸಾಧ್ಯತೆ ಇದೆ. ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.

ರಾಜಧಾನಿ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣ ಮುಂದುವರಿಯಲಿದ್ದು, ನಗರದ ಕೆಲವು ಪ್ರದೇಶಗಳಲ್ಲಿ ಮಾತ್ರ ಗಾಳಿ ಸಹಿತ ತುಂತುರು ಅಥವಾ ಅಲ್ಪ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ. ತಾಪಮಾನದಲ್ಲಿ ಹೆಚ್ಚಿನ ಬದಲಾವಣೆ ಕಂಡುಬರುವ ಸಾಧ್ಯತೆ ಇಲ್ಲವಾದರೂ, ನಗರದಲ್ಲಿ ತಂಪಾದ ವಾತಾವರಣ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ಮುಂಗಾರು ಚಟುವಟಿಕೆಗಳು ಮುಂದಿನ ಕೆಲವು ದಿನಗಳ ಕಾಲ ರಾಜ್ಯದ ಬಹುತೇಕ ಭಾಗಗಳಲ್ಲಿ ಸಕ್ರಿಯವಾಗಿರುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಹವಾಮಾನ ಇಲಾಖೆಯ ಸೂಚನೆಗಳನ್ನು ಗಮನಿಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

### ರಥೋತ್ಸವ ವಿವಾದದ ಕುರಿತು ಕಲ್ಲಯ್ಯಜ್ಜನವರ ಸ್ಪಷ್ಟನೆ-ಕೆಲ ಟ್ರಸ್ಟಿಗಳಿಂದ ಜೀವ ಬೆದರಿಕೆ ಆರೋಪ-ಪೊಲೀಸರಿಗೆ ದೂರು ನೀಡಲು ನಿರ್ಧಾರ

# ಭಕ್ತಿಯ ಕಾಣಿಕೆಗೆ ಜಾತಿಯ ಬಣ್ಣ ಏಕೆ..?

■ ವಿಜಯಸಾಕ್ಷಿ ಸುದ್ದಿ, ಗದಗ

ವೀರೇಶ್ವರ ಪುಣ್ಯಾಶ್ರಮದ ರಥೋತ್ಸವದ ಕುರಿತು ಇತ್ತೀಚೆಗೆ ಉಂಟಾಗಿರುವ ವಿವಾದಕ್ಕೆ ಸ್ಪಷ್ಟನೆ ನೀಡಿರುವ ಪುಣ್ಯಾಶ್ರಮದ ಪೀಠಾಧಿಪತಿ ಕಲ್ಲಯ್ಯಜ್ಜನವರು, ಭಕ್ತರು ನೀಡುವ ದೇಣಿಗೆಗೆ ಜಾತಿಯ ಬಣ್ಣ ಹಚ್ಚುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಬುಧವಾರ ಆಶ್ರಮದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಥೋತ್ಸವದ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು. ಕಳೆದ ನಾಲ್ಕು ವರ್ಷಗಳಿಂದ ರಥೋತ್ಸವ ಯಾವುದೇ ಅಡೆತಡೆಯಿಲ್ಲದೆ ನಡೆಯುತ್ತಿದ್ದು, ವಿವಿಧ ಸಮುದಾಯಗಳ ಭಕ್ತರು ಆಶ್ರಮಕ್ಕೆ ದೇಣಿಗೆ ನೀಡುವುದು ಸಂಪ್ರದಾಯವಾಗಿದೆ ಎಂದರು.

ಪೀರಸಾಬ ದಂಪತಿಗಳು ರಥಕ್ಕೆ ಗಾಲಿಗಳನ್ನು ದೇಣಿಗೆಯಾಗಿ ನೀಡಿದ್ದಾರೆ. ಕೆಲ ಭಕ್ತರು ತಮ್ಮ ಹೆಸರಿನೊಂದಿಗೆ ದೇಣಿಗೆ ನೀಡಿದರೆ, ಇನ್ನೂ ಕೆಲವರು ಹೆಸರು ಬಹಿರಂಗಪಡಿಸದೇ ಕಾಣಿಕೆ ಸಲ್ಲಿಸುತ್ತಾರೆ. ದೇಣಿಗೆ ನೀಡುವ ವಿಚಾರದಲ್ಲಿ ಜಾತಿ ಅಥವಾ ಧರ್ಮದ ಆಧಾರದ ಮೇಲೆ ವಿವಾದ ಸೃಷ್ಟಿಸುವುದು ಸರಿಯಲ್ಲ ಎಂದು ಅವರು ಹೇಳಿದರು.



ಇದೇ ವೇಳೆ ಆಶ್ರಮದ ಆಡಳಿತ ಹಾಗೂ ಹಣಕಾಸು ನಿರ್ವಹಣೆ ಕುರಿತು ಮಾತನಾಡಿದ ಕಲ್ಲಯ್ಯಜ್ಜನವರು, ತಾವು ಪೀಠಾಧಿಪತಿಯಾದ ಸಂದರ್ಭದಲ್ಲಿ ಆಶ್ರಮಕ್ಕೆ ಲಕ್ಷಾಂತರ ರೂಪಾಯಿ ಸಾಲವಿತ್ತು. ಅದನ್ನು ತೀರಿಸಿ ಆಶ್ರಮದ ಆರ್ಥಿಕ ಸ್ಥಿತಿಯನ್ನು ಸದೃಢಗೊಳಿಸಲಾಗಿದೆ. ಎಲ್ಲ ಆದಾಯ-ವೆಚ್ಚಗಳ ಲೆಕ್ಕಪತ್ರಗಳನ್ನು ಪಾರದರ್ಶಕವಾಗಿ ನಿರ್ವಹಿಸಲಾಗಿದೆ ಎಂದು ತಿಳಿಸಿದರು.

ಕೆಲ ಟ್ರಸ್ಟಿಗಳಿಂದ ತಮಗೆ ಜೀವ ಬೆದರಿಕೆ ಇದೆ ಎಂದು ಆರೋಪಿಸಿದ ಅವರು, ಈ ಕುರಿತು ಪೊಲೀಸರಿಗೆ ದೂರು ನೀಡುವುದಾಗಿ ಹೇಳಿದರು. ಹಲವು ವರ್ಷಗಳಿಂದ ಮಾನಸಿಕ ಕಿರುಕುಳ ನೀಡಲಾಗುತ್ತಿದ್ದು, ಈ ವಿಷಯವನ್ನು ಟ್ರಸ್ಟ್ ಸಮಿತಿ, ಭಕ್ತರು ಹಾಗೂ ಸಾರ್ವಜನಿಕರ ಗಮನಕ್ಕೆ ತರಲು ಸುದ್ದಿಗೋಷ್ಠಿ ನಡೆಸಲಾಗಿದೆ ಎಂದು ತಿಳಿಸಿದರು.

ವೀರೇಶ್ವರ ಪುಣ್ಯಾಶ್ರಮವು ಜಾತ್ಯಾತೀತ ಸಂಸ್ಥೆಯಾಗಿದ್ದು, ಎಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವ ಪರಂಪರೆಯನ್ನು ಹೊಂದಿದೆ. ಪೀರಸಾಬ ಕೌತಾಳ ಅವರೊಂದಿಗೆ ಆಶ್ರಮಕ್ಕೆ ಗುರು-ಶಿಷ್ಯರ ಸಂಬಂಧವಿದ್ದು, ಅವರು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಿಗೆ ಆಶ್ರಮದಿಂದ ಯಾವುದೇ ಆರ್ಥಿಕ ನೆರವು ನೀಡಿಲ್ಲ. ಶಿಕ್ಷಣ ಸಂಸ್ಥೆಗಳು ಸುಗಮವಾಗಿ ಕಾರ್ಯನಿರ್ವಹಿಸುವ ಉದ್ದೇಶದಿಂದಲೇ ಅವರಿಗೆ ಜವಾಬ್ದಾರಿ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಆಶ್ರಮದ ವ್ಯವಸ್ಥಾಪಕ ಹೇಮರಾಜಶಾಸ್ತ್ರೀ, ಎಂ. ಕಲ್ಲಿನಾಥಶಾಸ್ತ್ರೀ, ವೀರೇಶ ಕಿತ್ತೂರು, ಎಂ.ಜಿ. ಗುರುಸಿದ್ದೇಶ್ವರಶಾಸ್ತ್ರೀ, ಚನ್ನಬಸಯ್ಯ ಬಂಕಾಪುರ ಸೇರಿದಂತೆ ಇತರರು ಉಪಸ್ಥಿತರಿದ್ದರು.

> "ಭಕ್ತರ ದೇಣಿಗೆಗೆ ಜಾತಿ ಅಥವಾ ಧರ್ಮದ ಬಣ್ಣ ಹಚ್ಚುವುದು ಸರಿಯಲ್ಲ. ರಥೋತ್ಸವವನ್ನು ವಿವಾದದ ಕೇಂದ್ರವನ್ನಾಗಿಸದೇ ಭಕ್ತಿಭಾವದಿಂದ ನಡೆಸಬೇಕು."
> – **ಕಲ್ಲಯ್ಯಜ್ಜನವರು**, ಪೀಠಾಧಿಪತಿ, ವೀರೇಶ್ವರ ಪುಣ್ಯಾಶ್ರಮ

### ಪಿಎಂಎಫ್‌ಬಿವೈ ಯೋಜನೆ ಪ್ರಗತಿ ಪರಿಶೀಲನೆ:ರೈತರ ನೋಂದಣಿಗೆ ಡಿಸಿ ಶ್ರೀಧರ್ ಸೂಚನೆ

# ಬೆಳೆ ಹಾನಿಯಿಂದ ಪಾರಾಗಲು ವಿಮೆ ಮಾಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹವಾಮಾನ ವೈಪರೀತ್ಯ, ಅತಿವೃಷ್ಟಿ, ಅನಾವೃಷ್ಟಿ, ಗಾಳಿ-ಮಳೆ ಹಾಗೂ ಪ್ರವಾಹದಂತಹ ಪ್ರಕೃತಿ ವಿಕೋಪಗಳಿಂದ ಉಂಟಾಗುವ ಬೆಳೆ ನಷ್ಟದಿಂದ ರೈತರಿಗೆ ಆರ್ಥಿಕ ಭದ್ರತೆ ಒದಗಿಸಲು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ (ಪಿಎಂಎಫ್‌ಬಿವೈ) ಅಡಿಯಲ್ಲಿ ಅರ್ಹ ರೈತರ ನೋಂದಣಿಗೆ ವಿಶೇಷ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ, ತೋಟಗಾರಿಕೆ ಹಾಗೂ ಕಂದಾಯ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಗ್ರಾಮೀಣ ಮಟ್ಟದಲ್ಲಿ ರೈತರಿಗೆ ಯೋಜನೆ ಕುರಿತು ಜಾಗೃತಿ ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಬೇಕು ಎಂದು ತಿಳಿಸಿದರು.

**ಬೆಳೆ ವಿಮೆ ನೋಂದಣಿಗೆ ಪ್ರಮುಖ ದಿನಾಂಕಗಳು**

ಜುಲೈ 15: ಹೆಸರು, ಹತ್ತಿ (ಮಳೆಯಾಶ್ರಿತ ಹಾಗೂ ನೀರಾವರಿ)

ಜುಲೈ 31: ಗೋವಿನಜೋಳ, ಸಜ್ಜೆ, ತೊಗರಿ, ಶೇಂಗಾ, ಭತ್ತ

ಆಗಸ್ಟ್ 14: ಸೂರ್ಯಕಾಂತಿ (ಮಳೆಯಾಶ್ರಿತ ಹಾಗೂ ನೀರಾವರಿ)



ಬೆಳೆ ಹಾನಿಯಾದ ಸಂದರ್ಭದಲ್ಲಿ ರೈತರಿಗೆ ಸೂಕ್ತ ಪರಿಹಾರ ದೊರೆಯಲು ಬೆಳೆ ಕಟಾವು ಪ್ರಯೋಗಗಳನ್ನು ಪಾರದರ್ಶಕವಾಗಿ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗೆ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ ಅನುಷ್ಠಾನ ಸಂಸ್ಥೆಯಾಗಿ ಆಯ್ಕೆಯಾಗಿದ್ದು, ಪ್ರತಿ ತಾಲೂಕಿನಲ್ಲಿ ಸಮರ್ಪಕ ಸೇವೆ ನೀಡುವ ಪ್ರತಿನಿಧಿಗಳನ್ನು ನಿಯೋಜಿಸಬೇಕು ಎಂದು ಸೂಚಿಸಿದರು.

ರೈತರು ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು. ಬೆಳೆ ವಿಮೆಗೆ FRUITS FID ಕಡ್ಡಾಯವಾಗಿದ್ದು, ಪಹಣಿ, ಖಾತೆ ಪುಸ್ತಕ ಅಥವಾ ಕಂದಾಯ ರಶೀದಿ ದಾಖಲೆಯೊಂದಿಗೆ ಬ್ಯಾಂಕ್, ಕಾಮನ್ ಸರ್ವಿಸ್ ಸೆಂಟರ್ (CSC) ಹಾಗೂ ಗ್ರಾಮ ಒನ್ ಕೇಂದ್ರಗಳ ಮೂಲಕ 'ಸಂರಕ್ಷಣೆ' ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿ, ಬೆಳೆವಾರು ವಿಮಾ ಕಂತು ಪಾವತಿ ಕುರಿತು ಮಾಹಿತಿ ನೀಡಿದರು. ಬೆಳೆ ಸಾಲ ಪಡೆದ ರೈತರಿಗೆ ಯೋಜನೆ ಕಡ್ಡಾಯವಾಗಿದ್ದು, ಯೋಜನೆಯಲ್ಲಿ ಭಾಗವಹಿಸಲು ಇಚ್ಛಿಸದ ರೈತರು ಅಂತಿಮ ದಿನಾಂಕಕ್ಕಿಂತ ಏಳು ದಿನಗಳ ಮೊದಲು ಸಂಬಂಧಿತ ಬ್ಯಾಂಕ್ ವ್ಯವಸ್ಥಾಪಕರಿಗೆ ಲಿಖಿತ ಮುಚ್ಚಳಿಕೆ ಪತ್ರ ಸಲ್ಲಿಸಬೇಕು ಎಂದು ಹೇಳಿದರು.


ಈ ಸಂದರ್ಭದಲ್ಲಿ ಯೋಜನೆ ಕುರಿತು ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ್ ಎಂ.ವಿ., ಡಿಡಿಎಲ್‌ಆರ್ ರುದ್ರಣ್ಣಗೌಡ, ಕೃಷಿ ಇಲಾಖೆಯ ಉಪನಿರ್ದೇಶಕಿ ಸ್ಫೂರ್ತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> "ಬೆಳೆ ನಷ್ಟದಿಂದಾಗುವ ಆರ್ಥಿಕ ಹೊರೆ ತಪ್ಪಿಸಿಕೊಳ್ಳಲು ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು."
> – **ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

# ಮಾಹಿತಿ ನೀಡದ ಅಧಿಕಾರಿಗಳಿಗೆ ₹25 ಸಾವಿರ ದಂಡದ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾಹಿತಿ ಹಕ್ಕು ಕಾಯ್ದೆಯಡಿ ಸಾರ್ವಜನಿಕರು ಕೇಳಿದ ಮಾಹಿತಿಯನ್ನು ನೀಡದೆ ಸತಾಯಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ಎಚ್ಚರಿಕೆ ನೀಡಿದ್ದಾರೆ.



ಬೆಳಗಾವಿ ಪೀಠದಲ್ಲಿ ಪ್ರತಿದಿನ ಸುಮಾರು 60 ರಿಂದ 100 ಅರ್ಜಿಗಳ ವಿಚಾರಣೆ ಆಫ್‌ಲೈನ್ ಹಾಗೂ ಆನ್‌ಲೈನ್ ಮಾದರಿಯಲ್ಲಿ ನಡೆಯುತ್ತಿದ್ದು, ಮಾಹಿತಿ ನೀಡದಿರುವುದು, ಆಯೋಗದ ವಿಚಾರಣೆಗೆ ಗೈರುಹಾಜರಾಗುವುದು ಹಾಗೂ ಆಯೋಗದ ನೋಟಿಸ್‌ಗಳಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಮಾಹಿತಿ ಹಕ್ಕು ಕಾಯ್ದೆಯು ಜನಪರ ಮತ್ತು ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿದ್ದು, ಸಾಮಾನ್ಯ ಜನರಿಗೆ ಸರ್ಕಾರದ ಮಾಹಿತಿ ಸುಲಭವಾಗಿ ದೊರೆಯುವಂತೆ ಮಾಡುವ ಮಹತ್ವದ ಕಾಯ್ದೆಯಾಗಿದೆ. ಆದ್ದರಿಂದ ಸಾರ್ವಜನಿಕ ಮಾಹಿತಿ ನೀಡುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರಬಾರದು ಎಂದು ಸೂಚಿಸಿದ್ದಾರೆ.

ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡುವುದರ ಜೊತೆಗೆ, ₹25 ಸಾವಿರದವರೆಗೆ ದಂಡ ವಿಧಿಸುವುದು ಹಾಗೂ ಅರ್ಜಿದಾರರಿಗೆ ಸೂಕ್ತ ಪರಿಹಾರ ನೀಡುವಂತೆ ಆದೇಶ ಹೊರಡಿಸುವ ಅಧಿಕಾರ ಆಯೋಗಕ್ಕಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಜಯಕುಮಾರ ಬಿರಾದಾರ ಸೇವೆ ಸಮಾಜಕ್ಕೆ ಮಾದರಿ: ಹೂವಿನಶಿಗ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು

# ಗುರುಕುಲ ಮಕ್ಕಳ ದಾಸೋಹಕ್ಕೆ ದಾನಿಯ ಮಹಾದಾಸೋಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಠ-ಮಾನ್ಯಗಳು ಹಾಗೂ ಗುರುಕುಲಗಳು ನಡೆಸುವ ಅನ್ನ, ಅಕ್ಷರ ಮತ್ತು ಆಶ್ರಯದ ತ್ರಿವಿಧ ದಾಸೋಹ ಸೇವೆ ನಿರಂತರವಾಗಿ ಸಾಗಲು ದಾನಿಗಳ ಕೊಡುಗೆ ಅತ್ಯಮೂಲ್ಯವಾಗಿದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು. ಸಮೀಪದ ಹೂವಿನಶಿಗ್ಲಿ ಮಠದ ಗುರುಕುಲದ ಮಕ್ಕಳ ನಿತ್ಯದ ದಾಸೋಹಕ್ಕಾಗಿ ಪ್ರತಿ ಆರು ತಿಂಗಳಿಗೊಮ್ಮೆ ದಿನಸಿ ಪದಾರ್ಥಗಳನ್ನು ಪೂರೈಸುತ್ತಿರುವ ಕಲಬುರಗಿ ಜಿಲ್ಲೆಯ ಸೋನಾಳ ಗ್ರಾಮದ ಉದ್ಯಮಿ ವಿಜಯಕುಮಾರ ಸೂರ್ಯಕಾಂತ ಬಿರಾದಾರ ಅವರಿಗೆ ಗುರುಕುಲ ಹಾಗೂ ಗ್ರಾಮಸ್ಥರ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಸತ್ಕಾರ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



> "ದಾನಿಗಳ ಸಹಕಾರದಿಂದಲೇ ಗುರುಕುಲಗಳ ತ್ರಿವಿಧ ದಾಸೋಹ ಸೇವೆ ನಿರಂತರವಾಗಿ ಸಾಗುತ್ತಿದೆ."
> – **ಶ್ರೀ ಚನ್ನವೀರ ಮಹಾಸ್ವಾಮಿಗಳು, ಹೂವಿನಶಿಗ್ಲಿ ವಿರಕ್ತಮಠ**

ಸರ್ಕಾರದ ಯಾವುದೇ ಅನುದಾನವಿಲ್ಲದೆ ಗುರುಕುಲದ ನೂರಾರು ಮಕ್ಕಳಿಗೆ ತ್ರಿವಿಧ ದಾಸೋಹ ಸೇವೆ ನೀಡುವುದು ಸವಾಲಿನ ಕೆಲಸವಾಗಿದೆ. ಇಂತಹ ಸಂದರ್ಭದಲ್ಲಿ ವಿಜಯಕುಮಾರ ಬಿರಾದಾರ ಅವರಂತಹ ದಾನಿಗಳ ಸಹಕಾರದಿಂದಲೇ ಸೇವಾ ಪರಂಪರೆ ನಿರಂತರವಾಗಿ ಸಾಗುತ್ತಿದೆ ಎಂದು ಹೇಳಿದರು. ಸಮಾಜದಲ್ಲಿ ದಾನಿಗಳ ಸಂಖ್ಯೆ ಕಡಿಮೆಯಾಗುತ್ತಿರುವ ಸಂದರ್ಭದಲ್ಲಿ ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಹಲವು ವರ್ಷಗಳಿಂದ ಲಕ್ಷಾಂತರ ರೂಪಾಯಿ ಮೌಲ್ಯದ ದಿನಸಿ ಸಾಮಗ್ರಿಗಳನ್ನು ದೇಣಿಗೆಯಾಗಿ ನೀಡುತ್ತಿರುವ ವಿಜಯಕುಮಾರ ಬಿರಾದಾರ ಅವರ ಸೇವೆ ಸಮಾಜಕ್ಕೆ ಮಾದರಿಯಾಗಿದೆ. ಭಗವಂತ ಅವರಿಗೆ ಇನ್ನಷ್ಟು ಶಕ್ತಿ, ಸಂಪತ್ತು ಮತ್ತು ಸೇವಾ ಮನೋಭಾವವನ್ನು ಕರುಣಿಸಲಿ ಎಂದು ಹಾರೈಸಿದರು.

▶▶ 2ನೇ ಪುಟಕ್ಕೆ

# ಗುರುಕುಲ ಮಕ್ಕಳ ದಾಸೋಹಕ್ಕೆ ದಾನಿಯ ಮಹಾದಾಸೋಹ

▶▶ಮೊದಲನೇ ಪುಟದಿಂದ

ತಹಸೀಲ್ದಾರ್ ರವಿ ಕೊರಕನವರ ಮಾತನಾಡಿ, ಗುರುಕುಲ ಶಿಕ್ಷಣ ಪದ್ಧತಿ ಮರೆಯಾಗುತ್ತಿರುವ ಕಾಲಘಟ್ಟದಲ್ಲಿ ಹೂವಿನಶಿಗ್ಲಿ ಮಠವು ಅನಾಥ ಹಾಗೂ ಬಡ ಮಕ್ಕಳಿಗೆ ಶಿಕ್ಷಣ ಮತ್ತು ಸಂಸ್ಕಾರ ನೀಡುವ ಮಹತ್ವದ ಕಾರ್ಯ ಮಾಡುತ್ತಿದೆ. ಈ ಸೇವೆಗೆ ವಿಜಯಕುಮಾರ ಬಿರಾದಾರ ಅವರು ಹಲವು ವರ್ಷಗಳಿಂದ ಬೆನ್ನೆಲುಬಾಗಿ ನಿಂತಿರುವುದು ಶ್ಲಾಘನೀಯ ಎಂದರು.

ಗುರುಕುಲದ ಆಡಳಿತಾಧಿಕಾರಿ ಆರ್.ಜಿ. ಚಿಕ್ಕಮಠ ಮಾತನಾಡಿ, ಭಕ್ತರು ಹಾಗೂ ದಾನಿಗಳ ಸಹಕಾರದಿಂದಲೇ ಮಠದಲ್ಲಿ ಅನಾಥ ಮತ್ತು ಬಡ ಮಕ್ಕಳ ಸೇವೆ ಸಾಧ್ಯವಾಗುತ್ತಿದೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಿಜಯಕುಮಾರ ಎಸ್. ಬಿರಾದಾರ, ಮಕ್ಕಳ ಸೇವೆಯೇ ದೇವರ ಸೇವೆ ಎಂಬ ನಂಬಿಕೆಯಿಂದ ಈ ಕಾರ್ಯದಲ್ಲಿ ತೊಡಗಿದ್ದೇನೆ. ಗುರುಕುಲದ ಸೇವೆಯಲ್ಲಿ ಭಾಗಿಯಾಗಿರುವುದು ಆತ್ಮಸಂತೃಪ್ತಿ ತಂದಿದ್ದು, ಮುಂದೆಯೂ ಈ ಸೇವೆ ಮುಂದುವರಿಯಲಿ ಎಂಬುದು ನನ್ನ ಆಶಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸುಭಾಷ್ ಮಜ್ಜಗಿ, ರಾಜು ಚಂದರವಾಡ, ಧನರಾಜ ರಾಜಮನೆ, ಎಸ್.ಎಸ್. ಮೈನಾಲೆ, ಬಿ.ಬಿ. ಹೆಡೆ, ಮಹಾದೇವ ಬಿರಾದಾರ, ಮನೋಜ ಹಿರೇಮಠ, ಆಕಾಶ ಹೊನ್ನಿ, ಆರ್.ಬಿ. ಬನ್ನೂರ, ಚಂದ್ರಕಾಂತ ಘಾಟಗೆ, ಶೈಲಾ ಆದಿ, ಜಯಶ್ರೀ ಮೆಳ್ಳಿಗೇರಿ, ಯೋಗೇಂದ್ರ ಜಂಬಗಿ, ಗುರುಕುಲದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಮುಖ್ಯೋಪಾಧ್ಯಾಯ ಆರ್.ವಿ. ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು.

### ಖಾಸಗೀಕರಣ ಕೈಬಿಡದಿದ್ದರೆ ರಾಜ್ಯವ್ಯಾಪಿ ಹೋರಾಟದ ಎಚ್ಚರಿಕೆ

# ವಿದ್ಯುತ್ ಮೇಲೆ ಕಾರ್ಪೋರೇಟ್ ಕಣ್ಣು..!

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದಲ್ಲಿ ವಿದ್ಯುತ್ ಖಾಸಗೀಕರಣ ಪ್ರಕ್ರಿಯೆಯನ್ನು ಕೈಬಿಡಬೇಕು ಎಂದು ಆಗ್ರಹಿಸಿ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಗದಗ ಘಟಕದ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಶಂಕರಗೌಡ ಜಾಯನಗೌಡ್ರ, ವಿದ್ಯುತ್ ಖಾಸಗೀಕರಣದಿಂದ ರೈತರು, ಗೃಹ ಬಳಕೆದಾರರು ಹಾಗೂ ಸಣ್ಣ ಕೈಗಾರಿಕೆಗಳಿಗೆ ಭಾರೀ ಹೊರೆ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ದೇಶದ 26 ಕೋಟಿ ವಿದ್ಯುತ್ ಗ್ರಾಹಕರಿಗೆ ಸ್ಮಾರ್ಟ್ ಮೀಟರ್ ಅಳವಡಿಸುವ ಹೆಸರಿನಲ್ಲಿ ಪ್ರತಿ ಮೀಟರ್‌ಗೆ ಸುಮಾರು ₹8 ಸಾವಿರ ವೆಚ್ಚವಾಗಲಿದ್ದು, ಇದರಿಂದ ಲಕ್ಷಾಂತರ ಕೋಟಿ ರೂಪಾಯಿ ಖಾಸಗಿ ಕಂಪನಿಗಳ ಪಾಲಾಗಲಿದೆ ಎಂದು ಆರೋಪಿಸಿದರು. ವಿದ್ಯುತ್ ದರ ಏರಿಕೆ, ಸಬ್ಸಿಡಿ ಕಡಿತ ಹಾಗೂ ರೈತರ ಉಚಿತ ವಿದ್ಯುತ್ ಯೋಜನೆಗಳಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಹೇಳಿದರು.



ಖಾಸಗೀಕರಣ ಜಾರಿಯಾದರೆ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಕೆ, ಗೃಹಜ್ಯೋತಿ, ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಗಂಗಾ ಕಲ್ಯಾಣ ಸೇರಿದಂತೆ ವಿವಿಧ ಜನಪರ ಯೋಜನೆಗಳಿಗೆ ಹಿನ್ನಡೆಯಾಗಲಿದೆ. ಕೈಮಗ್ಗ ನೇಕಾರರು, ತೋಟಗಾರಿಕೆ ಬೆಳೆಗಾರರು, ಸಣ್ಣ ಕೈಗಾರಿಕೆಗಳು ಹಾಗೂ ಹೆಸ್ಕಾಂ ಕಾರ್ಮಿಕರ ಮೇಲೂ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಟಾಟಾ ಪವರ್ ಕಂಪನಿಗೆ ಪರವಾನಗಿ ನೀಡಬಾರದು. ಒಂದು ವೇಳೆ ಖಾಸಗೀಕರಣಕ್ಕೆ ಮುಂದಾದರೆ ರಾಜ್ಯಾದ್ಯಂತ ಬಂದ್, ಬಾರ್ಕೋಲ್ ಚಳವಳಿ ಹಾಗೂ ಜೈಲ್ ಭರೋ ಚಳವಳಿ ಹಮ್ಮಿಕೊಳ್ಳಲಾಗುವುದು

> "ವಿದ್ಯುತ್ ಖಾಸಗೀಕರಣ ಜಾರಿಯಾದರೆ ರೈತರ ಉಚಿತ ವಿದ್ಯುತ್, ಜನಪರ ಯೋಜನೆಗಳು ಹಾಗೂ ಸಬ್ಸಿಡಿಗಳಿಗೆ ಕತ್ತರಿ ಬೀಳಲಿದೆ. ರೈತ ವಿರೋಧಿ ಈ ಕ್ರಮವನ್ನು ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ."
>
> – **ಶಂಕರಗೌಡ ಜಾಯನಗೌಡ್ರ,** ಜಿಲ್ಲಾ ಅಧ್ಯಕ್ಷರು, ರೈತ ಸಂಘ ಮತ್ತು ಹಸಿರು ಸೇನೆ

ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬಸವರಾಜ ಮರಾಠ, ಎಂ.ಎಸ್. ಗುತ್ತೇದಾರ, ಮಹದೇವ ವೇರ್ಣೇಕರ, ಗೂಳಪ್ಪ ಗುಡದೂರ, ವಿರೇಶ ಮಾಳೊತ್ತರ, ಟಿ.ವಿ. ಕರವಿ, ಶಂಕರಗೌಡ ಪಾಟೀಲ, ಐ.ಬಿ. ಗದಗಿನ, ಫಕ್ಕೀರೇಶ ಬೆಳ್ಳಟ್ಟಿ, ವಿನಾಯಕ ಅಚಲಕರ, ವಿರೇಶ ಅಚಲಕರ, ಆದೇಶ ಹುಲಗೂರ, ಸಂಜಯ ಚಳಗೇರಿ, ಅನಿಲ ಕರಣೆ, ಹಸನಸಾಬ ದೊಡ್ಡಮನಿ, ಬಸನಗೌಡ ಮಲ್ಲನಗೌಡರ, ವಿರೇಶ ಕರವೀರಮಠ, ಜಗದೀಶ ಅಂಗಡಿ, ಅಂದಪ್ಪ ಅಂಗಡಿ ಸೇರಿದಂತೆ ರೈತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

# ವಿವಿಧ ಶಾಲೆಗಳಲ್ಲಿ ಯೋಗ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಲಕ್ಕುಂಡಿಯ ವಿವಿಧ ಶಾಲೆಗಳಲ್ಲಿ ಯೋಗಾಭ್ಯಾಸ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಇಲ್ಲಿಯ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿವೃತ್ತ ಉಪನ್ಯಾಸಕ ಆರ್.ಎನ್. ಗೌಡರ ವಿದ್ಯಾರ್ಥಿಗಳಿಗೆ ಯೋಗಾಸನಗಳ ಪ್ರಾತ್ಯಕ್ಷಿಕೆ ನೀಡಿ, "ಯೋಗಯುಕ್ತ–ರೋಗಮುಕ್ತ" ಎಂಬ ಸಂದೇಶದ ಮಹತ್ವವನ್ನು ತಿಳಿಸಿದರು. ಯೋಗವು ಭಾರತದ ಅಮೂಲ್ಯ ಪರಂಪರೆಯಾಗಿದ್ದು, ಪ್ರತಿಯೊಬ್ಬರೂ ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹೇಶ ಮುಸ್ಕಿನಭಾವಿ, ಪ್ರಕಾಶ ಅರಹುಣಶಿ, ಚನ್ನಪ್ಪ ಹುಬ್ಬಳ್ಳಿ, ಪ್ರಕಾಶ ಹಣವಾಳ ಹಾಗೂ ಮುಖ್ಯೋಪಾಧ್ಯಾಯ ಎಂ.ಎಸ್. ಬೇಲೇರಿ ಉಪಸ್ಥಿತರಿದ್ದರು.

ಅದೇ ರೀತಿ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಯೋಗ ದಿನಾಚರಣೆಯಲ್ಲಿ ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ ಮಾತನಾಡಿ, ಯೋಗವು ದೇಹ, ಮನಸ್ಸು ಹಾಗೂ ಆತ್ಮದ ಸಮತೋಲನ ಕಾಪಾಡುವ ಪ್ರಾಚೀನ ಭಾರತೀಯ ಪದ್ಧತಿಯಾಗಿದ್ದು, ಮಕ್ಕಳು ಪ್ರತಿದಿನ ಯೋಗಾಭ್ಯಾಸ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಧಾನಗುರು ಮಾತೆ ಆರ್.ಬಿ. ಬರದ್ವಾಡ, ಆರ್.ಎಂ. ದಂಡಿನ, ಪಿ.ಬಿ. ಬರದ್ವಾಡ, ಅರ್ಜುನ ಚಲವಾದಿ, ಎ.ಎಂ. ದಂಡಿನ, ಅಂಬುಜಾ ಕುಲಕರ್ಣಿ ಹಾಗೂ ಲಕ್ಷ್ಮೀ ಗರ್ಜಪ್ಪನವರ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ವಿವಿಧ ಯೋಗಾಸನಗಳನ್ನು ಪ್ರದರ್ಶಿಸಿ ಗಮನ ಸೆಳೆದರು.

# ವಿದ್ಯಾರ್ಥಿಗಳಿಗೆ ಬೆಂಚ್‌ಗಳು ದೇಣಿಗೆ




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ರಾಮ ನಗರದಲ್ಲಿರುವ ಗಂಗಾವತಿ ಭೀಮಪ್ಪನವರ ಪದವಿ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸ್ವಾಮಿ ವಿವೇಕಾನಂದ ಸಂಘ (ರಿ) ವತಿಯಿಂದ ಕಾಲೇಜಿಗೆ ಬೆಂಚ್‌ಗಳನ್ನು ಕೊಡುಗೆಯಾಗಿ ನೀಡಲಾಯಿತು. ಸಂಘದ ಈ ಸಮಾಜಮುಖಿ ಕಾರ್ಯವನ್ನು ಕಾಲೇಜು ಆಡಳಿತ ಮಂಡಳಿ ಶ್ಲಾಘಿಸಿ ಅಭಿನಂದನೆ ಸಲ್ಲಿಸಿತು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಮ್ಯಾದರ ರಾಮಣ್ಣ, ಬಿಜೆಪಿ ಮುಖಂಡ ಬಲ್ಲಾಹುಣಿಸಿ ರಾಮಣ್ಣ, ಸಮಾಜಸೇವಕರಾದ ಬಸವರಾಜ್ ರೆಡ್ಡಿ, ಜಾಂಗೀರ್, ರಾಮದೇವ್, ಸಂಚಿ ಶಿವಕುಮಾರ್, ರಮೇಶ್, ನಾಗಣ್ಣ, ದೊಡ್ಡ ವೀರಪ್ಪ, ಗೋವಿಂದ, ನಂದಿ ಶಿವಕುಮಾರ್, ಪ್ರಕಾಶ್, ಶೇಖರ್, ರವಿ, ಅಸ್ಲಾಂ, ಮಂಜು, ಕೊಟ್ರೇಶ್, ಹನುಮಂತ, ನಾಗರಾಜ, ಕಾಲೇಜಿನ ಅಧೀಕ್ಷಕ ಸುರೇಶ್, ಬೆರಳಚ್ಚುಗಾರ ಸಿ.ಎಂ. ಶ್ರೀನಿವಾಸ ಹಾಗೂ ಮಡಿವಾಳರ ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು.

# ಅಗ್ನಿಹೋತ್ರ ಹೋಮದೊಂದಿಗೆ ಯೋಗ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಸ್ಟೆಕ್ಟಮ್ ಪ್ರೌಢಶಾಲೆ ಆವರಣದಲ್ಲಿ ಭಾನುವಾರ ಅಂತಾರಾಷ್ಟ್ರೀಯ ಯೋಗ ದಿನವನ್ನು ನಿತ್ಯ ಯೋಗ ಭವ ನಿರೋಗ ಯೋಗ ತರಬೇತಿ ಕೇಂದ್ರದ ವತಿಯಿಂದ ಆಚರಿಸಲಾಯಿತು.

ಮುಂಗಾರು ಮಳೆಯ ಕೊರತೆ ಹಿನ್ನೆಲೆಯಲ್ಲಿ ಆರಂಭದಲ್ಲಿ ಅಗ್ನಿಹೋತ್ರ ಹೋಮ ನಡೆಸಿ ಮಳೆರಾಯನ ಆರಾಧನೆ ಮಾಡಲಾಯಿತು. ಬಳಿಕ ವೀಣಾ ಹತ್ತಿಕಾಳ ಹಾಗೂ ಶಶಿಕಲಾ ವಡಕಣ್ಣವರ ಯೋಗ ಮತ್ತು ಪ್ರಾಣಾಯಾಮ ಕುರಿತು ತರಬೇತಿ ನೀಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಶೈನ್ ಕರಾಟೆ ಅಕಾಡೆಮಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ನೂರಾರು ಮಂದಿ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಬಳಿಕ ಶಾಲಾ ಮಕ್ಕಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಿಸಲಾಯಿತು.

# ಚಂದನ ಶಾಲೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಚಂದನ ಸಿಬಿಎಸ್‌ಇ ವಸತಿ ಶಾಲೆಯಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಭಾನುವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಪ್ರಾಂಶುಪಾಲ ಆರ್.ಜಿ. ಭಾವನವರ, ಯೋಗವು ಪ್ರತಿಯೊಬ್ಬರ ಜೀವನದಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಆರೋಗ್ಯಕರ ಹಾಗೂ ಶಿಸ್ತಿನ ಬದುಕು ರೂಪಿಸಿಕೊಳ್ಳಲು ಯೋಗಾಭ್ಯಾಸ ಅತ್ಯಗತ್ಯವಾಗಿದೆ ಎಂದು ಹೇಳಿದರು.



ಯೋಗ, ಪ್ರಾಣಾಯಾಮ ಮತ್ತು ಧ್ಯಾನವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಹಾಗೂ ಉಜ್ವಲ ಭವಿಷ್ಯ ನಿರ್ಮಾಣಕ್ಕೆ ಪ್ರಮುಖ ಸಾಧನಗಳಾಗಿವೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ಇವುಗಳನ್ನು ಪ್ರತಿನಿತ್ಯ ಅಭ್ಯಾಸ ಮಾಡುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರತಿದಿನ ಬೆಳಿಗ್ಗೆ ಯೋಗಾಭ್ಯಾಸ ಮಾಡುವ ಮೂಲಕ ಆರೋಗ್ಯಕರ ಹಾಗೂ ಶಿಸ್ತಿನ ಜೀವನಶೈಲಿಯನ್ನು ಅಳವಡಿಸಿಕೊಂಡಿದ್ದು, ದೈಹಿಕ ಮತ್ತು ಮಾನಸಿಕ ಸದೃಢತೆಯನ್ನು ಬೆಳೆಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ವಿವಿಧ ಯೋಗಾಸನಗಳನ್ನು ಪ್ರದರ್ಶಿಸುವ ಮೂಲಕ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು.

# ಅಲಗಿಲವಾಡ ಶಾಲೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಸರ್ಕಾರಿ ಶಾಲೆಯಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಯೋಗದ ಮಹತ್ವದ ಕುರಿತು ಮಾತನಾಡಿದ ಶಿಕ್ಷಕ ಸತೀಶ ವಾರದ, ಇಂದಿನ ದಿನಮಾನದಲ್ಲಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 2014ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನ ಆಚರಣೆಯ



ಪ್ರಸ್ತಾಪ ಮಂಡಿಸಿದ್ದರು. ಬಳಿಕ 177 ರಾಷ್ಟ್ರಗಳ ಬೆಂಬಲದೊಂದಿಗೆ ಜೂನ್ 21ನ್ನು ಅಂತಾರಾಷ್ಟ್ರೀಯ ಯೋಗ ದಿನವಾಗಿ ಘೋಷಿಸಲಾಯಿತು ಎಂದು ತಿಳಿಸಿದರು.

ಯೋಗವು ಸಂಸ್ಕೃತದ "ಯುಜ್" ಎಂಬ ಪದದಿಂದ ಬಂದಿದ್ದು, ದೇಹ, ಮನಸ್ಸು ಹಾಗೂ ಆತ್ಮವನ್ನು ಒಗ್ಗೂಡಿಸುವ ಸಾಧನೆಯಾಗಿದೆ. ಮಹರ್ಷಿ ಪತಂಜಲಿ ಮತ್ತು ಘೇರಂಡ ಮುನಿಗಳ ಕೊಡುಗೆಯಿಂದ ಯೋಗ ಪದ್ಧತಿ ವ್ಯವಸ್ಥಿತ ರೂಪ ಪಡೆದಿದ್ದು, ಯೋಗಾಭ್ಯಾಸದಿಂದ ದೇಹದಲ್ಲಿ ರೋಗನಿರೋಧಕ ಶಕ್ತಿ ಹೆಚ್ಚುವುದರ ಜೊತೆ–ಗೆ ಆರೋಗ್ಯಕರ ಜೀವನ ಸಾಧ್ಯವಾಗುತ್ತದೆ ಎಂದು ಹೇಳಿದರು.

ಗಾಯತ್ರಿ ಮಂತ್ರ ಪಠಣದೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸೂರ್ಯನಮಸ್ಕಾರ, ಪದ್ಮಾಸನ, ವೃಕ್ಷಾಸನ, ಶವಾಸನ, ತಾಡಾಸನ, ಪಾದಹಸ್ತಾಸನ ಸೇರಿದಂತೆ ವಿವಿಧ ಯೋಗಾಸನಗಳನ್ನು ಮಾಡಿಸಿ ಅವುಗಳ ಉಪಯುಕ್ತತೆ ಕುರಿತು ತಿಳುವಳಿಕೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಪ್ರಧಾನಗುರು ಹಾಲೇಶ ಎಸ್. ಜಕ್ಕಲಿ, ಶಿಕ್ಷಕರಾದ ನೇಮೇಶ ಯರಗುಪ್ಪಿ, ಸತೀಶ ವಾರದ, ಗ್ರಾಮದ ಹಿರಿಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಯೋಗಾಭ್ಯಾಸದ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

### ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಅಂಚೆ ಇಲಾಖೆಯಿಂದ ಯೋಗ ಶಿಬಿರ

# ಯೋಗದಿಂದ ಆರೋಗ್ಯಕರ ಬದುಕು ಸಾಧ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿದಿನ ಯೋಗಾಭ್ಯಾಸ ಮಾಡುವುದರಿಂದ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಪ್ರಧಾನ ಅಂಚೆ ಪಾಲಕರಾದ ಶರಣಪ್ಪ ನಾಯ್ಕರ ಹೇಳಿದರು.

ಭಾರತೀಯ ಅಂಚೆ ಇಲಾಖೆಯ ಗದಗ ವಿಭಾಗೀಯ ಕಚೇರಿ ಹಾಗೂ ಮನರಂಜನಾ ಕೂಟದ ಆಶ್ರಯದಲ್ಲಿ ಪ್ರಧಾನ ಅಂಚೆ ಕಚೇರಿಯಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಯೋಗಾಭ್ಯಾಸದಿಂದ ದೇಹದ ಲವಲವಿಕೆ ಹೆಚ್ಚುವುದರ ಜೊತೆಗೆ ಮಾನಸಿಕ ಒತ್ತಡ ಕಡಿಮೆಯಾಗುತ್ತದೆ, ಮನಸ್ಸಿಗೆ ಶಾಂತಿ ದೊರೆಯುತ್ತದೆ ಹಾಗೂ ಏಕಾಗ್ರತೆ ವೃದ್ಧಿಯಾಗುತ್ತದೆ.



ಇಂದಿನ ವೇಗದ ಬದುಕಿನಲ್ಲಿ ಯೋಗವು ಮಾನಸಿಕ ನೆಮ್ಮದಿ ಮತ್ತು ದೈಹಿಕ ಸದೃಢತೆಯನ್ನು ಕಾಪಾಡುವ ಅತ್ಯುತ್ತಮ ಸಾಧನವಾಗಿದೆ ಎಂದು ಹೇಳಿದರು.

ರೋಣ ಉಪ ವಿಭಾಗದ ಅಂಚೆ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿ, ಪ್ರತಿಯೊಬ್ಬರೂ ದಿನನಿತ್ಯ ಯೋಗಾಭ್ಯಾಸ ರೂಢಿಸಿಕೊಳ್ಳಬೇಕು. ಯೋಗದಿಂದ ರೋಗ–ರುಜಿನಗಳಿಂದ ದೂರವಿರುವುದರ ಜೊತೆಗೆ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೂ ಪೂರಕವಾಗುತ್ತದೆ. ಕುಟುಂಬ ಸಮೇತ ಯೋಗಾಭ್ಯಾಸಕ್ಕೆ ಸಮಯ ಮೀಸಲಿಡಬೇಕು ಎಂದು ಸಲಹೆ ನೀಡಿದರು.

ಬ್ರಹ್ಮಕುಮಾರಿ ಸಂಸ್ಥೆಯ ಸಾವಿತ್ರಿ ಅಕ್ಕ ಯೋಗ ಶಿಬಿರ ನಡೆಸಿಕೊಟ್ಟು ಮಾತನಾಡಿ, ಯೋಗವು ಭಾರತದ ಅಮೂಲ್ಯ ಪರಂಪರೆಯಾಗಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ಈ ವರ್ಷದ ಯೋಗ ದಿನಾಚರಣೆಯ ಘೋಷವಾಕ್ಯ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಆಗಿದ್ದು, ಯೋಗದಿಂದ ಆರೋಗ್ಯ, ಪ್ರಾಣಾಯಾಮದಿಂದ ಮನಶಾಂತಿ ಹಾಗೂ ಜ್ಞಾನದಿಂದ ಜೀವನದ ಸಾರ್ಥಕತೆ ದೊರೆಯುತ್ತದೆ. ಪ್ರತಿಯೊಬ್ಬರೂ ಯೋಗವನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

> "ಯೋಗವು ಕೇವಲ ವ್ಯಾಯಾಮವಲ್ಲ; ಅದು ಆರೋಗ್ಯಕರ, ಶಾಂತಿಯುತ ಮತ್ತು ಸಮತೋಲಿತ ಜೀವನಕ್ಕೆ ದಾರಿದೀಪವಾಗಿದೆ. ಪ್ರತಿಯೊಬ್ಬರೂ ಯೋಗವನ್ನು ದಿನಚರಿಯ ಭಾಗವಾಗಿಸಿಕೊಳ್ಳಬೇಕು."
>
> – **ಶರಣಪ್ಪ ನಾಯ್ಕರ,** ಪ್ರಧಾನ ಅಂಚೆ ಪಾಲಕರು, ಗದಗ

ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ. ಅದು ದೇಹ, ಮನಸ್ಸು, ಆತ್ಮ ಮತ್ತು ಚೇತನದ ಸಮನ್ವಯ ಸಾಧಿಸುವ ಜೀವನ ವಿಧಾನವಾಗಿದೆ. ಯೋಗಾಸನಗಳು ದೇಹವನ್ನು ಬಲಿಷ್ಠಗೊಳಿಸಿದರೆ, ಪ್ರಾಣಾಯಾಮ ಮನಸ್ಸಿಗೆ ಶಾಂತಿ ನೀಡುತ್ತದೆ ಹಾಗೂ ಧ್ಯಾನ ಆತ್ಮಜ್ಞಾನ ವೃದ್ಧಿಗೆ ಸಹಕಾರಿಯಾಗುತ್ತದೆ ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಯೋಗದಲ್ಲಿ ಭಾಗವಹಿಸಿದ್ದವರಿಗೆ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ಸಂಕಲ್ಪ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಅಂಚೆ ಪಾಲಕರಾದ ಡಿ.ಜಿ. ಮ್ಯಾಗೇರಿ, ಬ್ರಹ್ಮಕುಮಾರಿ ಸಂಸ್ಥೆಯ ಬಿ.ಕೆ. ಮಮತಾ ಅಕ್ಕ, ಶೋಭಾ ಬೆಂಗಳೂರು ಹಾಗೂ ಅಂಚೆ ಇಲಾಖೆಯ ಸಿಬ್ಬಂದಿ ಪಾಲ್ಗೊಂಡಿದ್ದರು.

ವೆಂಕಟೇಶ ಆಕಳವಾಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಟಾಟಾಗೆ ವಿತರಣಾ ಪರವಾನಿಗೆ ಬೇಡ-ಇಲ್ಲದಿದ್ದರೆ ರಾಜ್ಯವ್ಯಾಪಿ ಹೋರಾಟದ ಎಚ್ಚರಿಕೆ

# ವಿದ್ಯುತ್ ಖಾಸಗೀಕರಣಕ್ಕೆ ರೈತರ ತೀವ್ರ ವಿರೋಧ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ವಿದ್ಯುತ್ ವಿತರಣೆಯನ್ನು ಖಾಸಗಿ ಕಂಪನಿಗಳಿಗೆ ವಹಿಸಬಾರದು ಹಾಗೂ ಟಾಟಾ ಕಂಪನಿಗೆ ವಿದ್ಯುತ್ ವಿತರಣಾ ಪರವಾನಿಗೆ ನೀಡಬಾರದು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಲಕ್ಷ್ಮೇಶ್ವರ ತಾಲೂಕು ಘಟಕದ ಕಾರ್ಯಕರ್ತರು ಮಂಗಳವಾರ ತಹಸೀಲ್ದಾರ್ ಎಂ. ಧನಂಜಯ ಅವರಿಗೆ ಮನವಿ ಸಲ್ಲಿಸಿದರು.

ವಿದ್ಯುತ್ ವಿತರಣಾ ಕ್ಷೇತ್ರಕ್ಕೆ ಖಾಸಗಿ ಕಂಪನಿಗಳು ಪ್ರವೇಶಿಸಿದರೆ ರೈತರ ಪಂಪ್‌ಸೆಟ್‌ಗಳಿಗೆ ಹಾಗೂ ಗೃಹ ಬಳಕೆದಾರರಿಗೆ ತೊಂದರೆಯಾಗಲಿದೆ. ಜೊತೆಗೆ ನಿರುದ್ಯೋಗ ಸಮಸ್ಯೆಯೂ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ವಿದ್ಯುತ್ ಇಲಾಖೆಯನ್ನು ಖಾಸಗಿಯವರಿಗೆ ವಹಿಸಲು ಯಾವುದೇ ಪರವಾನಿಗೆ ನೀಡಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈಗಾಗಲೇ ಕೆಲವು ರಾಜ್ಯಗಳಲ್ಲಿ ಖಾಸಗಿ ಕಂಪನಿಗಳು ವಿದ್ಯುತ್ ಕ್ಷೇತ್ರಕ್ಕೆ ಪ್ರವೇಶಿಸಿದ ಪರಿಣಾಮ ರೈತರು ಹಾಗೂ ಸಾಮಾನ್ಯ ಗ್ರಾಹಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಹೆಸ್ಕಾಂನ ಆರ್ಥಿಕ ಸ್ಥಿರತೆ, ವಿದ್ಯುತ್ ಕಾರ್ಮಿಕರ ಹಿತಾಸಕ್ತಿ ಹಾಗೂ ಗ್ರಾಮೀಣ ಗ್ರಾಹಕರ, ವಿಶೇಷವಾಗಿ ರೈತರ ಹಿತದೃಷ್ಟಿಯಿಂದ ಖಾಸಗಿ ವಿತರಣಾ ಪರವಾನಗಿ ಅರ್ಜಿಯನ್ನು ತಿರಸ್ಕರಿಸಬೇಕು ಎಂದು ಆಗ್ರಹಿಸಲಾಯಿತು.

ಒಂದು ವೇಳೆ ವಿದ್ಯುತ್ ಖಾಸಗೀಕರಣಕ್ಕೆ ಮುಂದಾದರೆ ರಾಜ್ಯಾದ್ಯಂತ ಬಂದ್ ಹಾಗೂ ಬಾರಕೋಲು ಚಳವಳಿ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ನಾಗರಾಜ ಕಳ್ಳಿಹಾಳ, ಮಂಜುನಾಥ ಅಣ್ಣಿಗೇರಿ ಸೇರಿದಂತೆ ರಾಮಣ್ಣ ಕಾಶಿಕೋವಿ, ಶಿವಾನಂದ ಲಿಂಗಶೆಟ್ಟಿ, ಮಂಜುನಾಥ ಹಾವಳಕೇರಿ, ಮುರುಗೇಶ ಬಳಿಗಾರ, ಶಂಭಣ್ಣ ಬಳಿಗಾರ, ಸಿದ್ಧಲಿಂಗಪ್ಪ ಕಳ್ಳಿಹಾಳ, ಪ್ರಕಾಶ ಬಡಿಗೇರ, ಖಾದರ್‌ಸಾಬ್ ರಿತ್ತಿ, ಶಿವಪ್ಪ ಶಿವಸಿಂಪಿಗೇರ, ದಾಲವ್‌ಸಾಬ ತಬ್ಬಲ, ಫಕ್ಕೀರೇಶ ಶೀರನಹಳ್ಳಿ, ಕುಮಾರ ಕರಡಿಕೊಪ್ಪ ಹಾಗೂ ರಮೇಶ ಕಾಶಿಕೋವಿ ಉಪಸ್ಥಿತರಿದ್ದರು.

ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಲಸಿಕೆ ಕಡ್ಡಾಯ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಜೂ. 28ರಿಂದ ಪಲ್ಸ್ ಪೋಲಿಯೋ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಐದು ವರ್ಷದೊಳಗಿನ ಯಾವುದೇ ಮಗು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜೂನ್ 28ರಂದು ನಡೆಯುವ ಅಭಿಯಾನವನ್ನು ಯಶಸ್ವಿಗೊಳಿಸಲು ಆರೋಗ್ಯ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕಾರ್ಯಕ್ರಮದ ಕುರಿತು ವ್ಯಾಪಕ ಜಾಗೃತಿ ಮೂಡಿಸಬೇಕು. ಬಸ್ ನಿಲ್ದಾಣ, ರೈಲು ನಿಲ್ದಾಣ, ಟೋಲ್‌ಗೇಟ್ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ವಿಶೇಷ ಲಸಿಕಾ ಕೇಂದ್ರಗಳನ್ನು ತೆರೆಯಬೇಕು. ಇಟ್ಟಿಗೆ ಭಟ್ಟಿಗಳು, ಕಟ್ಟಡ ನಿರ್ಮಾಣ ಪ್ರದೇಶಗಳು, ತೋಟದ ವಸತಿಗಳು ಹಾಗೂ ವಲಸೆ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಲು ವಿಶೇಷ ಕಾರ್ಯಪಡೆ ರಚಿಸಬೇಕು ಎಂದು ಸೂಚಿಸಿದರು.



> "ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಪಲ್ಸ್ ಪೋಲಿಯೋ ಹನಿ ಹಾಕಿಸುವುದು ಪ್ರತಿಯೊಬ್ಬರ ಜವಾಬ್ದಾರಿ."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಲಸಿಕಾ ದಿನದಂದು ಬೂತ್‌ಗಳಿಗೆ ಬಾರದ ಮಕ್ಕಳನ್ನು ಗುರುತಿಸಿ ನಂತರ ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮನೆ-ಮನೆಗೆ ಭೇಟಿ ನೀಡಿ ಪೋಲಿಯೋ ಹನಿಗಳನ್ನು ನೀಡಬೇಕು. ಗ್ರಾಮ ಪಂಚಾಯಿತಿಗಳ ಮೂಲಕ ಟಾಂ-ಟಾಂ, ಕರಪತ್ರ, ಪ್ರಭಾತ ಭೇರಿ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

1.13 ಲಕ್ಷ ಮಕ್ಕಳಿಗೆ ಲಸಿಕೆ ಗುರಿ

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ ಮಾಹಿತಿ ನೀಡಿ, ಜೂನ್ 28ರಿಂದ ಜುಲೈ 1ರವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಲಿದೆ ಎಂದರು.

ಜಿಲ್ಲೆಯಲ್ಲಿ ಗ್ರಾಮೀಣ ಭಾಗದ 46,845 ಹಾಗೂ ನಗರ ಪ್ರದೇಶದ 67,035 ಸೇರಿದಂತೆ ಒಟ್ಟು 1,13,880 ಮಕ್ಕಳನ್ನು ಗುರುತಿಸಲಾಗಿದೆ. ಲಸಿಕೆ ವಿತರಣೆಗೆ ಜಿಲ್ಲಾದ್ಯಂತ 765 ಬೂತ್‌ಗಳನ್ನು ಸ್ಥಾಪಿಸಲಾಗಿದ್ದು, ಬಸ್ ಹಾಗೂ ರೈಲು ನಿಲ್ದಾಣಗಳಲ್ಲಿಯೂ ವಿಶೇಷ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಅಭಿಯಾನಕ್ಕಾಗಿ 1,530 ವ್ಯಾಕ್ಸಿನೇಟರ್‌ಗಳು, 156 ಮೇಲ್ವಿಚಾರಕರು, 723 ಆಶಾ ಕಾರ್ಯಕರ್ತೆಯರು ಹಾಗೂ 514 ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಒಟ್ಟು 1,237 ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ಲಸಿಕೆ ಸಂಗ್ರಹಕ್ಕಾಗಿ 48 ಕೋಲ್ಡ್ ಚೈನ್ ಪಾಯಿಂಟ್‌ಗಳನ್ನು ಗುರುತಿಸಲಾಗಿದ್ದು, ಅಗತ್ಯ ಪ್ರಮಾಣದ ಲಸಿಕೆ ಈಗಾಗಲೇ ಜಿಲ್ಲೆಗೆ ತಲುಪಿದೆ ಎಂದರು.

ಸಭೆಯಲ್ಲಿ ಡಿಎಸ್‌ಒ ಡಾ. ವೆಂಕಟೇಶ ರಾಠೋಡ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನೋರಮಾ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಮನೋರಮಾ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಶನಿವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರ್ಮನ್ ಎನ್.ಎಂ. ಕುಡತರಕರ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಯೋಗವು ಆರೋಗ್ಯಕರ ಜೀವನದ ಮೂಲಾಧಾರ ವಾಗಿದ್ದು, ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಪೂರಕವಾಗಿದೆ. ಸರ್ವತೋಮುಖ ಆರೋಗ್ಯ ವೃದ್ಧಿಗೆ ಯೋಗ ಸಾಧನೆ ಅತ್ಯಂತ ಸಹಕಾರಿಯಾಗಿದ್ದು, ಪ್ರತಿಯೊಬ್ಬರೂ ಪ್ರತಿನಿತ್ಯ ಯೋಗಾಭ್ಯಾಸ ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ಲ ಮಾತನಾಡಿ, ಯೋಗವು ಜೀವನದಲ್ಲಿ ಬೆಳಕಿನ ದೀವಿಗೆಯಂತಿದ್ದು, ಒಮ್ಮೆ ಯೋಗವನ್ನು ಅಳವಡಿಸಿಕೊಂಡರೆ ಜೀವನ ಪಾವನವಾಗುತ್ತದೆ. ಯೋಗವು ಅನೇಕ ರೋಗಗಳಿಗೆ ರಾಮಬಾಣವಾಗಿದ್ದು, ಆರೋಗ್ಯಕರ ಬದುಕಿಗೆ ದಾರಿದೀಪವಾಗಿದೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಗ್ರಂಥಪಾಲಕ ಹರೀಶ ಹ. ಬಾರಕೇರ ಯೋಗದ ಇತಿಹಾಸ, ಮಹತ್ವ ಹಾಗೂ ವಿವಿಧ ಯೋಗಾಸನಗಳ ಪ್ರಯೋಜನಗಳ ಕುರಿತು ವಿದ್ಯಾರ್ಥಿಗಳಿಗೆ ಸವಿಸ್ತಾರ ಮಾಹಿತಿ ನೀಡಿದರು.

ದೈಹಿಕ ನಿರ್ದೇಶಕ ಖಯುಂ ನವಲೂರ ಅವರು ವಿದ್ಯಾರ್ಥಿಗಳಿಗೆ ವಜ್ರಾಸನ, ಅರ್ಧಚಕ್ರಾಸನ, ಶೀತಲಿ ಪ್ರಾಣಾಯಾಮ ಸೇರಿದಂತೆ ವಿವಿಧ ಯೋಗಾಸನಗಳನ್ನು ಪ್ರದರ್ಶಿಸಿ ಯೋಗಾಭ್ಯಾಸ ಮಾಡಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಪಿಯುಸಿ ಸಂಯೋಜಕಿ ಶಾಹಿದಾ ಶಿರಹಟ್ಟಿ, ಮಹಾವಿದ್ಯಾಲಯದ ಸಂಯೋಜಕಿ ಪ್ರೊ. ಸವಿತಾ ಪೂಜಾರ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಂಗೀತ-ಸಾಹಿತ್ಯದ ಸಂಗಮಕ್ಕೆ ಸಾಕ್ಷಿಯಾದ 'ಮಾಸದ ಮಾತು' ಕಾರ್ಯಕ್ರಮ

# ಗಾನ ಮುಂಗಾರಿನಲ್ಲಿ ಭಾವಗಳ ಮಳೆ..!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

"ಭಾರತೀಯರಿಗೆ ಮುಂಗಾರು ಎನ್ನುವುದು ಕೇವಲ ಮಳೆಯಲ್ಲ. ಅದು ಒಂದು ಹಬ್ಬ, ಒಂದು ಉತ್ಸವ, ಸಂಭ್ರಮ ಹಾಗೂ ಇಡೀ ದೇಶದ ಜೀವಾಳ" ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕದ ಅಧ್ಯಕ್ಷ ಗುರುರಾಜ ಹವಳದ ಅಭಿಪ್ರಾಯಪಟ್ಟರು.

ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಡಿ.ಎಲ್. ಪಾಟೀಲ ಅವರ ಮನೆಯಲ್ಲಿ ಆಯೋಜಿಸಿದ್ದ 'ಮಾಸದ ಮಾತು' ಸರಣಿ ಕಾರ್ಯಕ್ರಮ 'ಗಾನ ಮುಂಗಾರು -ಸಂಗೀತದ ತುಂತುರು' ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಪಾಲ್ಗೊಂಡಿದ್ದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಎಂ.ಎನ್. ಬರಮಗೌಡ್ರ ಮಾತನಾಡಿ, "ಮುಂಗಾರಿನ ಮಳೆ ಬದುಕಿಗೆ ಜೀವ ತುಂಬಿದರೆ, ಸಂಗೀತ ಆ ಬದುಕಿಗೆ ಚೈತನ್ಯ ತುಂಬುತ್ತದೆ. ಈ ಬಾರಿ ಮುಂಗಾರಿನ ಕೊರತೆ ಎದುರಾಗಿರುವ ಸಂದರ್ಭದಲ್ಲಿ ಸಾಹಿತ್ಯ ಪರಿಷತ್ತು ಇಂತಹ ಕಾರ್ಯಕ್ರಮಗಳ ಮೂಲಕ ಕೃಷಿಕರಿಗೆ ನೈತಿಕ ಧೈರ್ಯ ತುಂಬುತ್ತಿರುವುದು ಶ್ಲಾಘನೀಯ" ಎಂದು ಹೇಳಿದರು.

ಹಿರಿಯ ಚಿಂತಕ ಚಂಬಣ್ಣ ಬಾಳಿಕಾಯಿ ಮಾತನಾಡಿ, ಸಾಹಿತ್ಯದ ಜೊತೆಗೆ ಸಮಾಜವನ್ನು ಬೆಸೆಯುವ ಕೆಲಸವನ್ನು ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಮಾಡುತ್ತಿದೆ. ಜನರನ್ನು ಒಂದೇ ವೇದಿಕೆಯಲ್ಲಿ ಸೇರಿಸುವ ಇಂತಹ ಸಮಾಜಮುಖಿ ಕಾರ್ಯಕ್ರಮಗಳು ಅತ್ಯಂತ ಅರ್ಥಪೂರ್ಣವಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



> "ಮುಂಗಾರಿನ ಮಳೆ ಭೂಮಿಗೆ ಜೀವ ತುಂಬಿದರೆ, ಸಂಗೀತ ಮನಸ್ಸಿಗೆ ಜೀವ ತುಂಬುತ್ತದೆ. ಎರಡೂ ಬದುಕಿನ ಅವಿಭಾಜ್ಯ ಅಂಗಗಳು."
> – **ಗುರುರಾಜ ಹವಳದ,** ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಲಕ್ಷ್ಮೇಶ್ವರ ತಾಲೂಕು ಘಟಕ

ಜಿ.ಎಂ. ಪೂಜಾರ ಹಾಗೂ ಬಿ.ಎಸ್. ಹರ್ಲಾಪುರ ಮಾತನಾಡಿ, "ಮನುಷ್ಯನ ಬದುಕಿನ ಆರಂಭದಿಂದ ಅಂತ್ಯದವರೆಗೆ ಸಂಗೀತ ಹಾಸುಹೊಕ್ಕಾಗಿದೆ. ಗಾನವನ್ನು ಇಷ್ಟಪಡದ ಮನಸ್ಸೇ ಇಲ್ಲ" ಎಂದು ಹೇಳಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೆಡ್ಲೇರಿ ಅಧ್ಯಕ್ಷತೆ ವಹಿಸಿದ್ದರು. ಧರಣೇಂದ್ರಗೌಡ ಪಾಟೀಲ, ಬೀನಾ ಧರಣೇಂದ್ರಗೌಡ ಪಾಟೀಲ, ಅನ್ನಪೂರ್ಣ ಹರ್ಲಾಪುರ, ಈರಣ್ಣ ಗಾಣಿಗೇರ, ಮಂಜುನಾಥ ಚಾಕಲಬಿ, ನಾಗರಾಜ ಮಜ್ಜಿಗುಡ್ಡ, ಎಚ್.ಎಂ. ಸಪ್ಪಿನ, ಡಿ.ಎಚ್. ಪಾಟೀಲ ಹಾಗೂ ಅರವಿಂದ ದೇಶಪಾಂಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ನಡೆದ 'ಗಾನ ಮುಂಗಾರು' ಸಂಗೀತ ಕಾರ್ಯಕ್ರಮದಲ್ಲಿ ಡಾ. ಎಸ್.ಸಿ. ನೇಕಾರ, ಮಂಜುನಾಥ ಉಮಚಗಿ, ಮಂಜುನಾಥ ಕೊಡ್ಲಿ, ನವೀನ ಅಂಗಡಿ, ರವಿರಾಜ ಶಿಗ್ಲಿ ಹಾಗೂ ಕು. ಅಮೋಘ ಹರಕುಣಿ ಅವರು ನೀಡಿದ ಸುಮಧುರ ಗಾಯನ ಸಂಗೀತಾಸಕ್ತರನ್ನು ಮಂತ್ರಮುಗ್ಧರನ್ನಾಗಿಸಿತು.

ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ 'ಹೆಮ್ಮೆಯ ಕನ್ನಡಿಗ-2026' ಪ್ರಶಸ್ತಿ ಪುರಸ್ಕೃತ ಹಾಗೂ ಸಾಹಿತ್ಯ ಪರಿಷತ್ತಿನ ಪದಾಧಿಕಾರಿ ಶಂಕರ ಶಿಳ್ಳಿನ ಅವರನ್ನು ಸನ್ಮಾನಿಸಲಾಯಿತು. ಜೊತೆಗೆ ಸಂಗೀತ ಕಾರ್ಯಕ್ರಮದಲ್ಲಿ ಭಾಗವಹಿಸಿದ ಗಾಯಕರನ್ನೂ ಗೌರವಿಸಲಾಯಿತು.

ರೈತರ ಸಂಕಷ್ಟ ನಿವಾರಣೆಗೆ ವರುಣನ ಮೊರೆ; ಸಂಗಟಿ-ಸಾರು ದಾಸೋಹದಲ್ಲಿ ನೂರಾರು ಭಕ್ತರು ಭಾಗಿ

# ಮಳೆಗಾಗಿ ಎಪಿಎಂಸಿಯಲ್ಲಿ ವಿಶೇಷ ಪ್ರಾರ್ಥನೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೇ ರೈತ ಸಮುದಾಯ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚೇತರಿಸಿಕೊಳ್ಳಲಿ ಎಂಬ ಆಶಯದೊಂದಿಗೆ ಗದಗ ಎಪಿಎಂಸಿ ವ್ಯಾಪಾರ ವಲಯದ ವತಿಯಿಂದ ಸೋಮವಾರ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಹಾಗೂ ಪ್ರಾರ್ಥನೆ ಸಲ್ಲಿಸಲಾಯಿತು.

ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ರೈತರ ಉತ್ಪನ್ನಗಳು ಮಾರುಕಟ್ಟೆಗೆ ಆಗಮಿಸದ ಕಾರಣ ಗದಗ ಎಪಿಎಂಸಿಯ ವಹಿವಾಟು ಸೇರಿದಂತೆ ವ್ಯಾಪಾರ ಚಟುವಟಿಕೆಗಳ ಮೇಲೂ ಪರಿಣಾಮ ಬಿದ್ದಿದೆ. ಇದರ ಪರಿಣಾಮವಾಗಿ ದಲಾಲರು, ವ್ಯಾಪಾರಸ್ಥರು, ಕಾರಕೂನರು, ಚಕ್ಕಡಿಯವರು, ಹಮಾಲರು ಹಾಗೂ ಕೃಷಿ ಆಧಾರಿತ ಕಾರ್ಮಿಕ ವರ್ಗದ ಜೀವನೋಪಾಯಕ್ಕೂ ಸಂಕಷ್ಟ ಎದುರಾಗಿದೆ.



ಈ ಹಿನ್ನೆಲೆಯಲ್ಲಿ ಗದಗ ಎಪಿಎಂಸಿಯ ಬಸವಣ್ಣ ದೇವಸ್ಥಾನ, ವೀರೇಶ್ವರ ಪುಣ್ಯಾಶ್ರಮ, ಬನ್ನಿಮಹಾಂಕಾಳಿ ದೇವಸ್ಥಾನ, ಮಾರುತಿ ದೇವಸ್ಥಾನ ಹಾಗೂ ಕಾಶೀ ವಿಶ್ವನಾಥ ನಗರದ ದುರ್ಗಾದೇವಿ-ಕಾಶೀ ವಿಶ್ವನಾಥ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ವರುಣ ದೇವರಲ್ಲಿ ಮಳೆಗಾಗಿ ಪ್ರಾರ್ಥಿಸಲಾಯಿತು.

ಪೂಜಾ ಕಾರ್ಯಕ್ರಮದ ಅಂಗವಾಗಿ ಜೋಡೆತ್ತಿನ ಚಕ್ಕಡಿಯೊಂದಿಗೆ ಡೊಳ್ಳು-ಮೇಳದ ಭವ್ಯ ಮೆರವಣಿಗೆ ನಡೆಸಲಾಯಿತು. ಬಳಿಕ ದೇವಾಲಯಗಳಲ್ಲಿ ವಿಶೇಷ ಸಂಕಲ್ಪ ಮಾಡಿ, ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ, ಕೃಷಿ ಕ್ಷೇತ್ರಕ್ಕೆ ಹೊಸ ಚೈತನ್ಯ ದೊರೆಯಲಿ ಹಾಗೂ ಗ್ರಾಮೀಣ ಆರ್ಥಿಕ ವ್ಯವಸ್ಥೆ ಪುನಶ್ಚೇತನಗೊಳ್ಳಲಿ ಎಂದು ಪ್ರಾರ್ಥಿಸಲಾಯಿತು.

**'ರೈತನ ನಗು ಮರಳಲಿ'**

ಮಳೆಗಾಗಿ ನಡೆದ ವಿಶೇಷ ಪೂಜೆಯಲ್ಲಿ ಭಾಗವಹಿಸಿದವರು, ಉತ್ತಮ ಮಳೆಯಾಗಿ ಕೃಷಿ ಉತ್ಪಾದನೆ ಹೆಚ್ಚಳವಾಗಲಿ, ರೈತರ ಬದುಕು ಸಮೃದ್ಧಿಯಾಗಲಿ ಹಾಗೂ ಎಪಿಎಂಸಿ ಸೇರಿದಂತೆ ಗ್ರಾಮೀಣ ಆರ್ಥಿಕ ಚಟುವಟಿಕೆಗಳು ಮತ್ತೆ ಚೇತರಿಸಿಕೊಳ್ಳಲಿ ಎಂದು ವರುಣ ದೇವರಲ್ಲಿ ಪ್ರಾರ್ಥಿಸಿಲಾಯಿತು.

ಕಾರ್ಯಕ್ರಮದಲ್ಲಿ ಎಪಿಎಂಸಿ ದಲಾಲರು, ಖರೀದಾರರು, ವ್ಯಾಪಾರಸ್ಥರು, ಕಾರಕೂನರು, ಚಕ್ಕಡಿಯವರು, ಹಮಾಲರು, ತಳಗಾಳು ಸಂಘದ ಸದಸ್ಯರು, ರೈತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

ಪೂಜೆಯ ಬಳಿಕ ಹಮಾಲರು ಹಾಗೂ ಚಕ್ಕಡಿಯವರ ಸಂಘದ ಕಾರ್ಯಾಲಯದ ಎದುರು ಭಕ್ತರಿಗೆ ಸಂಗಟಿ-ಸಾರು ದಾಸೋಹ ಏರ್ಪಡಿಸಲಾಗಿತ್ತು. ನೂರಾರು ಜನರು ದಾಸೋಹದಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು.

ಮಳೆಯ ಕೊರತೆಯಿಂದ ರೈತರು ಮಾತ್ರವಲ್ಲದೆ ಕೃಷಿ ಆಧಾರಿತ ಸಂಪೂರ್ಣ ಆರ್ಥಿಕ ವ್ಯವಸ್ಥೆಯೇ ಸಂಕಷ್ಟಕ್ಕೆ ಸಿಲುಕಿದ್ದು, ಉತ್ತಮ ಮಳೆಯಾದರೆ ಮಾತ್ರ ರೈತರಿಂದ ಹಿಡಿದು ಕಾರ್ಮಿಕರವರೆಗೆ ಎಲ್ಲ ವರ್ಗದ ಜನರ ಬದುಕಿನಲ್ಲಿ ನೆಮ್ಮದಿ ಮೂಡಲಿದೆ ಎಂಬ ಆಶಯ ಕಾರ್ಯಕ್ರಮದುದ್ದಕ್ಕೂ ವ್ಯಕ್ತವಾಯಿತು.

ಕೆಎಲ್‌ಇ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

# ಮಾನಸಿಕ ಒತ್ತಡ ನಿವಾರಣೆಗೆ ಯೋಗವೇ ಮದ್ದು..!

■ವಿಜಯಸಾಕ್ಷಿ ಸುದ್ದಿ, ಗದಗ

ಮಾನಸಿಕ ಒತ್ತಡ, ಆತಂಕ ಮತ್ತು ಜೀವನಶೈಲಿ ಸಂಬಂಧಿತ ಸಮಸ್ಯೆಗಳಿಂದ ಮುಕ್ತಿ ಪಡೆಯಲು ಯೋಗ ಮತ್ತು ಪ್ರಾಣಾಯಾಮ ಅತ್ಯಂತ ಪರಿಣಾಮಕಾರಿ ಸಾಧನಗಳಾಗಿವೆ ಎಂದು ವಕೀಲರು ಹಾಗೂ ಯೋಗ ತರಬೇತಿದಾರರಾದ ಶಾರದಾ ಕವಲೂರ ಹೇಳಿದರು.

ನಗರದ ಕೆ.ಎಲ್.ಇ. ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ದೈಹಿಕ ಶಿಕ್ಷಣ ವಿಭಾಗ ಹಾಗೂ ಎನ್‌ಎಸ್‌ಎಸ್ ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತವು ಯೋಗ ಪರಂಪರೆಯ ದೇಶವಾಗಿದ್ದು, ಯೋಗಾಭ್ಯಾಸದಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಹಿರಿಯರು ಮಾತ್ರವಲ್ಲದೆ ವಿದ್ಯಾರ್ಥಿಗಳೂ ಪ್ರತಿದಿನ ಯೋಗ ಮತ್ತು ಪ್ರಾಣಾಯಾಮವನ್ನು ಅಭ್ಯಾಸ ಮಾಡಿದರೆ ಒತ್ತಡದಿಂದ ಮುಕ್ತಿ ಪಡೆಯಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.




ದೈಹಿಕ ಶಿಕ್ಷಕ ಹಾಗೂ ಯೋಗ ತರಬೇತಿದಾರ ಸುನೀಲ ಹಿರೇಮಠ ಅವರು ಅತಿಥಿಗಳೊಂದಿಗೆ ವಿವಿಧ ಯೋಗಾಸನಗಳ ಪ್ರದರ್ಶನ ನೀಡಿ ಯೋಗದ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯ ಬಿ.ಜಿ. ಶೆಲ್ಲಿಕೇರಿ ಮಾತನಾಡಿ, ವಿದ್ಯಾರ್ಥಿಗಳು ಯೋಗವನ್ನು ಜೀವನದ ಭಾಗವನ್ನಾಗಿಸಿಕೊಂಡರೆ ಏಕಾಗ್ರತೆ, ನೆನಪಿನ ಶಕ್ತಿ ಹಾಗೂ ಆತ್ಮವಿಶ್ವಾಸ ವೃದ್ಧಿಯಾಗಲು ಸಹಕಾರಿಯಾಗುತ್ತದೆ ಎಂದು ಹೇಳಿದರು.


> "ವಿದ್ಯಾರ್ಥಿಗಳು ಪ್ರತಿದಿನ ಯೋಗ ಮತ್ತು ಪ್ರಾಣಾಯಾಮ ಅಭ್ಯಾಸ ಮಾಡಿದರೆ ಮಾನಸಿಕ ಒತ್ತಡ ದೂರವಾಗಿ, ಏಕಾಗ್ರತೆ ಮತ್ತು ಆರೋಗ್ಯ ಎರಡನ್ನೂ ಉತ್ತಮವಾಗಿ ಕಾಪಾಡಿಕೊಳ್ಳಬಹುದು."
> – **ಶಾರದಾ ಕವಲೂರ,** ವಕೀಲೆ ಹಾಗೂ ಯೋಗ ತರಬೇತಿದಾರೆ

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್.ಎಂ. ಹುಲ್ಲೂರು ಮಾತನಾಡಿ, ದೈನಂದಿನ ಜೀವನದಲ್ಲಿ ಯೋಗ ಮತ್ತು ಪ್ರಾಣಾಯಾಮ ಅಳವಡಿಸಿಕೊಂಡರೆ ಒತ್ತಡವನ್ನು ದೂರವಿಟ್ಟು ದೀರ್ಘಕಾಲದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಶಿಕ್ಷಕರು, ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ವಿವಿಧ ಯೋಗಾಸನಗಳನ್ನು ಅಚ್ಚುಕಟ್ಟಾಗಿ ಪ್ರದರ್ಶಿಸಿ ಮೆಚ್ಚುಗೆ ಗಳಿಸಿದರು.

ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಡಾ. ಸಿ.ಬಿ. ರಣಗಟ್ಟಿಮಠ ಅತಿಥಿಗಳನ್ನು ಸ್ವಾಗತಿಸಿ ಪರಿಚಯಿಸಿದರು. ಕು. ಭಾವನಾ ಪ್ರಾರ್ಥಿಸಿದರು. ಡಾ. ವಿಜಯ ವಿ. ಮುರದಂಡೆ ವಂದಿಸಿದರು. ಕು. ಶಿವಮೂರ್ತಯ್ಯಾ ರೇಷ್ಮಿ ಕಾರ್ಯಕ್ರಮ ನಿರೂಪಿಸಿದರು.

# ರಾಜ್ಯಸಭಾ ಸದಸ್ಯ ಡಾ. ಎಂ. ನಾಗರಾಜಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಭಾರತೀಯ ಜನತಾ ಪಕ್ಷದಿಂದ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಡಾ. ಎಂ. ನಾಗರಾಜ ಅವರಿಗೆ ಕಂಬಳಿ ಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಧಾರವಾಡ ವಿಭಾಗ ಪ್ರಭಾರಿ ಜಯತೀರ್ಥ ಕಟ್ಟಿ, ಬಸರಾಜ ಕುಂದಗೋಳಮಠ, ಬಿಜೆಪಿ ಗದಗ ಜಿಲ್ಲಾ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ, ಕೃಷಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಮಾಲತೇಶ್ ಶ್ಯಾಗೋಟಿ, ಸಮಾಜದ ಮುಖಂಡರಾದ ಶಿವು ಡಂಬಳ, ಹನುಮಂತ ಹಳ್ಳೂರ, ಮಂಜುನಾಥ ಜೋಗಿನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿದ ಡಾ. ಎಂ. ನಾಗರಾಜ ಅವರಿಗೆ ಮುಖಂಡರು ಶುಭ ಹಾರೈಸಿ, ರಾಜ್ಯಸಭೆಯಲ್ಲಿ ಜನಪರ ಹಾಗೂ ಅಭಿವೃದ್ಧಿಪರ ಕಾರ್ಯಗಳಿಗೆ ಮತ್ತಷ್ಟು ಕೊಡುಗೆ ನೀಡುವಂತೆ ಆಶಿಸಿದರು.

# ರಾಷ್ಟ್ರೀಯ ಬಾಲ ಪ್ರತಿಭೆ ಪ್ರಶಸ್ತಿಗೆ ಶ್ರೀರಕ್ಷ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ರಾಮನಗರದ ಪ್ರತಿಭಾವಂತ ಬಾಲಕಿ ಕುಮಾರಿ ಹೆಚ್. ಶ್ರೀರಕ್ಷ ಅವರು ಪ್ರತಿಷ್ಠಿತ ಶ್ರೀ ವಾಲ್ಮೀಕಿ ಕಲಾ ಸೇವಾ ರಾಷ್ಟ್ರೀಯ ಬಾಲ ಪ್ರತಿಭೆ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ವಿಜಯನಗರ ಜಿಲ್ಲೆಯ ಹೊಸಪೇಟೆಯ ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆ (ರಿ.) ವತಿಯಿಂದ ಜೂನ್ 28ರಂದು ಆಯೋಜಿಸಿರುವ 13ನೇ ವಾರ್ಷಿಕೋತ್ಸವ ಹಾಗೂ ರಾಜ್ಯ-ರಾಷ್ಟ್ರ ಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶ್ರೀರಕ್ಷ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷೆ ಅನುರಾಧ ವಾಲ್ಮೀಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ರಾಮನಗರದ ಹಿಟ್ನಾಳ್ ಶ್ರೀನಿವಾಸ ಹಾಗೂ ಶ್ರೀದೇವಿ ದಂಪತಿಯ ಪುತ್ರಿಯಾಗಿರುವ ಶ್ರೀರಕ್ಷ, ಪ್ರಸಿದ್ಧಿ ಶಾಲೆಯಲ್ಲಿ ಮೂರನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಕರಾಟೆ ಹಾಗೂ ಭರತನಾಟ್ಯ ಕ್ಷೇತ್ರಗಳಲ್ಲಿ ವಿಶೇಷ ಪ್ರತಿಭೆ ತೋರಿದ್ದಾರೆ. ಅಲ್ಲದೇ ಮೊದಲನೇ ತರಗತಿಯಲ್ಲಿಯೇ 10 ಅಡಿ ಎತ್ತರದ ಮಲ್ಲಗಂಬ ಏರುವ ಮೂಲಕ ಗಮನ ಸೆಳೆದಿದ್ದರು.

ಬಾಲ್ಯದಲ್ಲಿಯೇ ವಿವಿಧ ಕ್ಷೇತ್ರಗಳಲ್ಲಿ ತೋರಿದ ಸಾಧನೆ ಹಾಗೂ ಪ್ರತಿಭೆಯನ್ನು ಪರಿಗಣಿಸಿ ರಾಷ್ಟ್ರೀಯ ಬಾಲ ಪ್ರತಿಭೆ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಶ್ರೀರಕ್ಷ ಅವರ ಸಾಧನೆಗೆ ಕರಾಟೆ ತರಬೇತುದಾರರಾದ ಅಲಬೂರು ನಾಗರಾಜ ಮತ್ತು ಕಿರಣ್, ಭರತನಾಟ್ಯ ಶಿಕ್ಷಕಿ ಅಂಬಿಕಾ ಮೇಡಂಗು ಅಭಿನಂದನೆ ಸಲ್ಲಿಸಿದ್ದಾರೆ.

ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆಯಾಗಿರುವ ಶ್ರೀರಕ್ಷ ಅವರಿಗೆ ಕುಟುಂಬ ಸದಸ್ಯರು, ಪ್ರಸಿದ್ಧಿ ಶಾಲೆಯ ಶಿಕ್ಷಕರು, ಆಡಳಿತ ಮಂಡಳಿ ಹಾಗೂ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.

## ಗೊಜನೂರದಲ್ಲಿ ಹಸುಗರುವಿನ ಮೇಲೆ ಮಾರಣಾಂತಿಕ ದಾಳಿ; ಅನಧಿಕೃತ ಅಂಗಡಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

# ಬೀದಿ ನಾಯಿಗಳ ಅಟ್ಟಹಾಸಕ್ಕೆ ಕರು ಬಲಿ..!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿದಂತೆ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಮಾಂಸ ಹಾಗೂ ಎಗ್‌ರೈಸ್ ಅಂಗಡಿಗಳ ಪರಿಣಾಮ ಬೀದಿ ನಾಯಿಗಳ ಹಾವಳಿ ಮಿತಿಮೀರಿದ್ದು, ಮಕ್ಕಳು ಹಾಗೂ ಸಾಕು ಪ್ರಾಣಿಗಳ ಜೀವಕ್ಕೆ ಅಪಾಯ ಎದುರಾಗಿದೆ ಎಂಬ ಆರೋಪ ಕೇಳಿ ಬಂದಿದೆ.

ಅಂಗಡಿಗಳ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡದೆ ರಸ್ತೆ ಬದಿ, ಖಾಲಿ ಜಾಗ ಹಾಗೂ ಚರಂಡಿಗಳ ಬಳಿ ಎಸೆಯುತ್ತಿರುವುದರಿಂದ ಬೀದಿ ನಾಯಿಗಳಿಗೆ ಶಾಶ್ವತ ಆಹಾರ ಮೂಲ ಸಿಗುತ್ತಿದ್ದು, ನಾಯಿಗಳು ಗುಂಪುಗೂಡಿ ಸಾಕು ಪ್ರಾಣಿಗಳು ಹಾಗೂ ಸಾರ್ವಜನಿಕರ ಮೇಲೆ ದಾಳಿ ನಡೆಸುತ್ತಿರುವ ಘಟನೆಗಳು ಹೆಚ್ಚಾಗುತ್ತಿವೆ.

ಇದಕ್ಕೆ ಸಾಕ್ಷಿಯೆಂಬಂತೆ ಬುಧವಾರ ಬೆಳಗಿನ ಜಾವ ತಾಲೂಕಿನ ಗೊಜನೂರ ಗ್ರಾಮದಲ್ಲಿ ರೈತ ಚನ್ನಪ್ಪ ಷಣ್ಮುಕಿ ಅವರ ಮನೆಯಲ್ಲಿದ್ದ





"ಅನಧಿಕೃತ ಮಾಂಸ ಹಾಗೂ ಎಗ್‌ರೈಸ್ ಅಂಗಡಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಿ, ಬೀದಿ ನಾಯಿಗಳ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು."
**– ಮಂಜುನಾಥ ಮಾಗಡಿ, ತಾಲೂಕು ಅಧ್ಯಕ್ಷರು, ಸಮಗ್ರ ರೈತ ಸಂಘಟನೆಗಳ ಒಕ್ಕೂಟ**

ಹಸುಗರುವಿನ ಮೇಲೆ ಬೀದಿ ನಾಯಿಗಳು ಮಾರಣಾಂತಿಕ ದಾಳಿ ನಡೆಸಿವೆ. ಗಂಭೀರವಾಗಿ ಗಾಯಗೊಂಡ ಕರುವನ್ನು ಗದಗ ಜಿಲ್ಲಾ ಪಶುವೈದ್ಯಕೀಯ ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದೆ.

ಈ ಘಟನೆಗೆ ಬೇಸರ ವ್ಯಕ್ತಪಡಿಸಿರುವ ರೈತ ಚನ್ನಪ್ಪ ಷಣ್ಮುಕಿ, ತಹಸೀಲ್ದಾರರು, ಪೊಲೀಸ್ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ಪಶುವೈದ್ಯಕೀಯ ಇಲಾಖೆಗೆ ಮನವಿ ಸಲ್ಲಿಸಿ, ಇಂತಹ ಘಟನೆಗಳಿಗೆ ಕಾರಣವಾಗುತ್ತಿರುವ ಅನಧಿಕೃತ ಮಾಂಸ ಮಾರಾಟದ ಅಂಗಡಿಗಳನ್ನು ಬಂದ್ ಮಾಡಬೇಕು ಹಾಗೂ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಮನವಿ ಸ್ವೀಕರಿಸಿದ ಗ್ರಾಮ ಆಡಳಿತಾಧಿಕಾರಿ ಅನಿಲಕುಮಾರ ಬೇವಿನಮರದ, ಘಟನೆಯ ಕುರಿತು ಮಾಹಿತಿ ಪಡೆದು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

ಶಾಲೆಗೆ ತೆರಳುವ ಮಕ್ಕಳು, ವೃದ್ಧರು ಹಾಗೂ ಬೆಳಗಿನ ಜಾವ ವಾಯುವಿಹಾರಕ್ಕೆ ಹೋಗುವ ನಾಗರಿಕರು ಕೂಡ ನಾಯಿಗಳ ದಾಳಿಯ ಭಯದಲ್ಲೇ ಓಡಾಡುವಂತಾಗಿದೆ. ಬೈಕ್ ಸವಾರರನ್ನು ಬೆನ್ನಟ್ಟುವ ಘಟನೆಗಳು ಅಪಘಾತಗಳಿಗೆ ಕಾರಣವಾಗುತ್ತಿರುವುದು ಸಾರ್ವಜನಿಕರ ಆತಂಕ ಹೆಚ್ಚಿಸಿದೆ.

ಬೀದಿ ನಾಯಿಗಳ ಸಂತಾನಹರಣ, ರೇಬೀಸ್ ಲಸಿಕಾ ಅಭಿಯಾನ ಹಾಗೂ ಮಾಂಸದ ಅಂಗಡಿಗಳಿಗೆ ಕಡ್ಡಾಯ ತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಜಾರಿಗೊಳಿಸುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ತಾಲೂಕಿನಾದ್ಯಂತ ಇಂತಹ ಘಟನೆಗಳು ಮರುಕಳಿಸುತ್ತಿದ್ದು, ಅಧಿಕಾರಿಗಳು ತಾತ್ಕಾಲಿಕ ಕ್ರಮಕ್ಕೆ ಸೀಮಿತರಾಗದೇ ಶಾಶ್ವತ ಪರಿಹಾರ ಕಲ್ಪಿಸಬೇಕು. ಇಲ್ಲದಿದ್ದರೆ ರೈತರೊಂದಿಗೆ ಹೋರಾಟ ನಡೆಸಲಾಗುವುದು ಎಂದು ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ ಎಚ್ಚರಿಕೆ ನೀಡಿದ್ದಾರೆ.

## ಹಂಪಾಪಟ್ಟಣದಲ್ಲಿ ಹಾಲುಮತ ಸಮಾಜದ ವಿಶಿಷ್ಟ ಆಚರಣೆ

# ಮಳೆಗಾಗಿ ಕಂಬಳಿ ಬೀಸಿ ಪ್ರಾರ್ಥನೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ, ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಹಾಗೂ ಗ್ರಾಮದಲ್ಲಿ ಸುಖ-ಶಾಂತಿ ನೆಲೆಸಲಿ ಎಂಬ ಆಶಯದೊಂದಿಗೆ ತಾಲೂಕಿನ ಹಂಪಾಪಟ್ಟಣದಲ್ಲಿ ಹಾಲುಮತ ಸಮಾಜದ ವತಿಯಿಂದ ಸಾಂಪ್ರದಾಯಿಕ ಕಂಬಳಿ ಬೀಸುವ ಆಚರಣೆ ಭಕ್ತಿಭಾವದಿಂದ ನೆರವೇರಿತು.

ಗ್ರಾಮದ ಪಾರಂಪರಿಕ ಸಂಪ್ರದಾಯದಂತೆ ಮೂರು ದಿನಗಳ ಕಾಲ ನಡೆದ ಗುರ್ಜಿ ಆಚರಣೆಯ ಸಮಾರೋಪದ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕದಿರಲಿ ಹಾಗೂ ಕೃಷಿ ಚಟುವಟಿಕೆಗಳು ಯಶಸ್ವಿಯಾಗಿ ಸಾಗಲಿ ಎಂಬ ಉದ್ದೇಶದಿಂದ ಗ್ರಾಮಸ್ಥರು ಮಳೆರಾಯನಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಹಾಲುಮತ



ಸಮಾಜದ ಮುಖಂಡರು ಹಾಗೂ ಗ್ರಾಮಸ್ಥರು ವಿಶೇಷ ಪೂಜೆ ಸಲ್ಲಿಸಿದ ಬಳಿಕ, ಸಮಾಜದ ಹಿರಿಯರಾದ ರಂಗಪ್ಪ ಅವರು ಸಂಪ್ರದಾಯಬದ್ಧವಾಗಿ ಕಂಬಳಿ ಬೀಸುವ ಮೂಲಕ ಉತ್ತಮ ಮಳೆಯಾಗುವಂತೆ ಪ್ರಾರ್ಥಿಸಿದರು. ಈ ವೇಳೆ ರೈತರು ಹಾಗೂ ಗ್ರಾಮಸ್ಥರು ಬೆಳೆ ಸಮೃದ್ಧಿ ಮತ್ತು ಗ್ರಾಮ ಕಲ್ಯಾಣಕ್ಕಾಗಿ ಮೊರೆ ಇಟ್ಟರು.

ಹಾಲುಮತ ಸಮುದಾಯದಲ್ಲಿ ಕಂಬಳಿ ಬೀಸುವ ಆಚರಣೆಗೆ

**ಪೂರ್ವಜರ ಪರಂಪರೆ**

"ಕಂಬಳಿ ಬೀಸುವ ಆಚರಣೆ ಕೇವಲ ಸಂಪ್ರದಾಯವಲ್ಲ; ಉತ್ತಮ ಮಳೆ, ಸಮೃದ್ಧ ಬೆಳೆ ಮತ್ತು ರೈತರ ಸುಖಜೀವನಕ್ಕಾಗಿ ನಮ್ಮ ಪೂರ್ವಜರು ರೂಪಿಸಿದ ನಂಬಿಕೆಯ ಸಂಕೇತವಾಗಿದೆ."

ವಿಶೇಷ ಮಹತ್ವವಿದ್ದು, ಇದು ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಜನಪದ ಸಂಪ್ರದಾಯವಾಗಿದೆ. ಪ್ರಕೃತಿಯೊಂದಿಗೆ ಬೆಸೆದುಕೊಂಡಿರುವ ರೈತ ಸಮುದಾಯದ ನಂಬಿಕೆ, ಭಕ್ತಿ ಹಾಗೂ ಕೃಷಿ ಸಂಸ್ಕೃತಿಯ ಪ್ರತೀಕವಾಗಿ ಈ ಆಚರಣೆ ಇಂದಿಗೂ ಜೀವಂತವಾಗಿದೆ.

ಬಳಿಕ ಗ್ರಾಮದ ದೇವರುಗಳ ಪ್ರದಕ್ಷಿಣೆ ನಡೆಸಿ, ಊರಿನ ಹೊರವಲಯದಲ್ಲಿರುವ ಬನ್ನಿ ಮರದ ಬಳಿ ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ಭಕ್ತರಿಗೆ ಕೇಸರಿ ಬಾತ್ ಹಾಗೂ ಉಪ್ಪಿಟ್ಟು ಪ್ರಸಾದ ವಿತರಿಸಲಾಯಿತು.

ಮಹಿಳೆಯರು ಜನಪದ ಗೀತೆಗಳನ್ನು ಹಾಡುವ ಮೂಲಕ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು. ವಿಶೇಷವಾಗಿ "ಗುರ್ಜಿ ಗುರ್ಜಿ ಎಲ್ಲಿಂದ ಬಂದೆ, ಮಳೆರಾಯನ ಸಂದೇಶ ತಂದೆ" ಎಂಬ ಜನಪದ ಗೀತೆ ಎಲ್ಲರ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಬಿನಾಗರಾಜ್, ಕನಕಪ್ಪ ಉಪ್ಪಾರ್, ರಂಗಪ್ಪ, ಬಸಪ್ಪ, ರಮೇಶ್, ಕರಕಟ್ಟಿ ನಾಗರಾಜ್, ಹುಲಿಗೆಮ್ಮ ಉಪ್ಪಾರ್, ಬಸವರಾಜ್ ಬಳಿಗಾರ, ಸಿ. ಸೋಮನಾಥ್, ಎಸ್. ಬಸವರಾಜ್, ಶರಣ್, ಶರಣಬಸನಗೌಡ, ಟಿ. ಕೊಟ್ರೇಶ್, ಎನ್ನ ನಾಗರಾಜ, ಪತ್ರಿ ಎಲ್ಲಪ್ಪ, ಟಿ. ಗೌತಮ್, ಉಪ್ಪರಂಗಪ್ಪ, ಸಣ್ಣಪ್ಪ ನಾಗರಾಜ, ಉಪ್ಪಾರ್ ಕೊಟ್ರೇಶ್, ಎಂ. ಕೊಟ್ರೇಶ್, ಮಾರ್ಗೇಶ್ ಸೇರಿದಂತೆ ಅನೇಕ ಗ್ರಾಮಸ್ಥರು ಭಾಗವಹಿಸಿದ್ದರು.

# ಕಲಾ ಟ್ರಸ್ಟ್‌ಗೆ ಕದಮ್ಮನವರ ಕೊಟ್ರೇಶ್ ಅಧ್ಯಕ್ಷ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ರಂಗ ಚೈತ್ರ ಸಾಂಸ್ಕೃತಿಕ ಕಲಾ ಟ್ರಸ್ಟ್‌ನ ತಾಲೂಕು ಅಧ್ಯಕ್ಷರಾಗಿ ಹನಸಿ ಗ್ರಾಮದ ಕದಮ್ಮನವರ ಕೊಟ್ರೇಶ್ ಆಯ್ಕೆಯಾಗಿದ್ದಾರೆ.

ಪಟ್ಟಣದ ರಾಮನಗರದಲ್ಲಿ ಮಂಗಳವಾರ ಸಂಜೆ ನಡೆದ ಟ್ರಸ್ಟ್ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಟ್ರಸ್ಟ್‌ನ ಗೌರವಾಧ್ಯಕ್ಷರಾಗಿ ಸಿ. ಶಿವಮೂರ್ತಿ, ಅಧ್ಯಕ್ಷರಾಗಿ ಕದಮ್ಮನವರ ಕೊಟ್ರೇಶ್, ಹಿರಿಯ ಸಲಹೆಗಾರರಾಗಿ ಸೋಮನಗೌಡ್ರು,

"ಗ್ರಾಮೀಣ ಭಾಗದ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸಿ, ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಟ್ರಸ್ಟ್ ಮೂಲಕ ಹೆಚ್ಚಿನ ಒತ್ತು ನೀಡಲಾಗುವುದು."
**– ಕದಮ್ಮನವರ ಕೊಟ್ರೇಶ್,** ನೂತನ ಅಧ್ಯಕ್ಷರು

ಉಪಾಧ್ಯಕ್ಷರಾಗಿ ಟಿ. ಶೇಖರಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಕೆ. ಪರಶುರಾಮ್, ಸಹ ಕಾರ್ಯದರ್ಶಿಯಾಗಿ ಕೆ. ದೊಡ್ಡಬಸಪ್ಪ, ಖಜಾಂಚಿಯಾಗಿ ಸಿ. ರಮೇಶ್, ಸಂಘಟನಾ ಕಾರ್ಯದರ್ಶಿಯಾಗಿ ಕೆ. ಚಿಕ್ಕನಗೌಡ ಹಾಗೂ ಕೆ. ಕುಬೇರಪ್ಪ, ಕಾನೂನು ಸಲಹೆಗಾರರಾಗಿ ಡಿ. ಉಮಾಶಂಕರ್ ಅವರನ್ನು ಆಯ್ಕೆ ಮಾಡಲಾಯಿತು.

ನೂತನ ಪದಾಧಿಕಾರಿಗಳು ಟ್ರಸ್ಟ್‌ನ ಸಾಂಸ್ಕೃತಿಕ ಹಾಗೂ ಕಲಾ ಚಟುವಟಿಕೆಗಳನ್ನು ಇನ್ನಷ್ಟು ಬಲಪಡಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಸಭೆಯಲ್ಲಿ ಟ್ರಸ್ಟ್‌ನ ಸದಸ್ಯರು, ಕಲಾಭಿಮಾನಿಗಳು ಹಾಗೂ ವಿವಿಧ ಗ್ರಾಮಗಳ ಮುಖಂಡರು ಉಪಸ್ಥಿತರಿದ್ದರು.

## ಮರಬ್ಬಿಹಾಳದಲ್ಲಿ ಮಾಜಿ ಶಾಸಕ ಎಸ್. ಭೀಮನಾಯ್ಕರಿಂದ ಉದ್ಘಾಟನೆ

# ಸುಬ್ಬರೆಡ್ಡಿ ಸ್ಮರಣಾರ್ಥ ಕ್ರೀಡಾಕೂಟಕ್ಕೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಮರಬ್ಬಿಹಾಳ ಗ್ರಾಮದಲ್ಲಿ ಲಕ್ಷ್ಮಿ ಪೌಲ್ಟ್ರಿ ಫಾರಂ ಮಾಲೀಕರಾಗಿದ್ದ ದಿವಂಗತ ಸುಬ್ಬರೆಡ್ಡಿ ಅವರ ಸ್ಮರಣಾರ್ಥ ಅಪ್ಪು ಕ್ರಿಕೆಟರ್ಸ್ ವತಿಯಿಂದ ಆಯೋಜಿಸಲಾದ ಜಿಲ್ಲಾಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಮಾಜಿ ಶಾಸಕ ಎಸ್. ಭೀಮನಾಯ್ಕ ನಾಣ್ಯ ತೂರುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ದಿವಂಗತ ಸುಬ್ಬರೆಡ್ಡಿ ಅವರು ಸಮಾಜದೊಂದಿಗೆ ಆತ್ಮೀಯ ಬಾಂಧವ್ಯ ಹೊಂದಿದ್ದ ಸರಳ ಹಾಗೂ ಸಜ್ಜನ ವ್ಯಕ್ತಿಯಾಗಿದ್ದರು. ಅವರ ನೆನಪನ್ನು ಚಿರಸ್ಥಾಯಿಯಾಗಿ ಉಳಿಸಿಕೊಳ್ಳುವ ಉದ್ದೇಶದಿಂದ

"ಕ್ರೀಡೆಗಳು ಯುವಕರನ್ನು ಆರೋಗ್ಯವಂತರನ್ನಾಗಿಸುವುದರ ಜೊತೆಗೆ ಉತ್ತಮ ವ್ಯಕ್ತಿತ್ವ ರೂಪಿಸುತ್ತವೆ. ದಿ. ಸುಬ್ಬರೆಡ್ಡಿ ಅವರ ನೆನಪಿನಲ್ಲಿ ಆಯೋಜಿಸಿರುವ ಈ ಪಂದ್ಯಾವಳಿ ಯುವಕರಿಗೆ ಪ್ರೇರಣೆಯಾಗಲಿದೆ."
**– ಎಸ್. ಭೀಮನಾಯ್ಕ,** ಮಾಜಿ ಶಾಸಕ

ಯುವಕರು ಜಿಲ್ಲಾಮಟ್ಟದ ಕ್ರೀಡಾಕೂಟ ಆಯೋಜಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ಸುಬ್ಬರೆಡ್ಡಿ ಅವರ ಆದರ್ಶಗಳು, ಸಮಾಜಮುಖಿ ಚಿಂತನೆ ಹಾಗೂ ಸೇವಾ ಮನೋಭಾವ ಯುವಜನತೆಗೆ ಸದಾ ಪ್ರೇರಣೆಯಾಗಲಿ. ಕ್ರೀಡೆಗಳು ಯುವಕರಲ್ಲಿ ಶಿಸ್ತು, ನಾಯಕತ್ವ ಹಾಗೂ ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ಭೀಮನಾಯ್ಕ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕುರಿ ಶಿವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಬಾಲಕೃಷ್ಣ ಬಾಬು, ಉಮಾಪತಿ ಸ್ವಾಮಿ, ಸಿಕಂದರ್, ಬಾಲಪ್ಪ ಸೇರಿದಂತೆ ಸ್ಥಳೀಯ ಮುಖಂಡರು, ಕ್ರೀಡಾಭಿಮಾನಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಲಿಂಗಾಯತ ಪ್ರಗತಿಶೀಲ ಸಂಘದ 2803ನೇ ಶಿವಾನುಭವದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಯೋಗದಿಂದಲೇ ಆರೋಗ್ಯದ ಸಮತೋಲನ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಯೋಗ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ನಿತ್ಯ ಜೀವನದಲ್ಲಿ ನೈತಿಕ ಆಚರಣೆಗಳನ್ನು ಶುದ್ಧವಾಗಿಟ್ಟುಕೊಳ್ಳಲು ಯೋಗ ಸಹಕಾರಿಯಾಗಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ನಗರದ ತೋಂಟದಾರ್ಯ ಶ್ರೀಮಠದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ 2803ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಮಾತನಾಡಿದ ಶ್ರೀಗಳು, ಯೋಗದ ಮಹತ್ವವನ್ನು ವಿಶ್ವಕ್ಕೆ ಪರಿಚಯಿಸುವಲ್ಲಿ ಭಾರತದ ಕೊಡುಗೆ ಅಪಾರವಾಗಿದೆ. ಹಣಕ್ಕಿಂತ ಆರೋಗ್ಯವೇ ಶ್ರೇಷ್ಠ ಸಂಪತ್ತು. ಶುಚಿ ಆಹಾರ, ವಿಹಾರ, ನಡಿಗೆ, ವ್ಯಾಯಾಮ ಹಾಗೂ ಯೋಗವನ್ನು ಪ್ರತಿಯೊಬ್ಬರೂ ತಮ್ಮ ದಿನಚರಿಯ ಭಾಗವಾಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಇಂದಿನ ಜೀವನಶೈಲಿಯಿಂದ ದೈಹಿಕ ಮತ್ತು ಮಾನಸಿಕ



ಅಸಮತೋಲನ ಹೆಚ್ಚಾಗಿದ್ದು, ಸಮತೋಲನಭರಿತ ಬದುಕಿಗೆ ಯೋಗವೇ ಪರಿಣಾಮಕಾರಿ ಮಾರ್ಗವಾಗಿದೆ. ಪತಂಜಲಿಯ ಯೋಗ ಪರಂಪರೆ ವಿಶ್ವಕ್ಕೆ ಮಾದರಿಯಾಗಿದ್ದು, ಅದು ಭಾರತೀಯ ಸಂಸ್ಕೃತಿಯ ಹೆಮ್ಮೆಯಾಗಿದೆ ಎಂದು ತಿಳಿಸಿದರು.

ಗದುಗಿನ ಪತಂಜಲಿ ಯೋಗ ಕೇಂದ್ರದ ಮುಖ್ಯಸ್ಥ ಹಾಗೂ ಯೋಗ ಸಾಧಕ ರುದ್ರಣ್ಣ ಗುಳಗುಳಿ ಉಪನ್ಯಾಸ ನೀಡಿ, ದಿನಚರಿ ಯೋಗದಿಂದ ಆರಂಭವಾದರೆ ದಿನವಿಡೀ ಚೈತನ್ಯದಿಂದ ಬದುಕಲು ಸಾಧ್ಯವಾಗುತ್ತದೆ. ಎಲ್ಲ ಕಾರ್ಯಗಳಿಗೂ ಸಮಯ ಮೀಸಲಿಡುವ ನಾವು ಆರೋಗ್ಯದ ವಿಚಾರದಲ್ಲಿ ನಿರ್ಲಕ್ಷ್ಯ ತೋರುತ್ತಿದ್ದೇವೆ. ಒತ್ತಡದ ಬದುಕಿನಿಂದ ಮುಕ್ತಿ ಪಡೆಯಲು ಯೋಗವೇ ಸೂಕ್ತ

"ಹಣ ಕಳೆದುಕೊಂಡರೆ ಮತ್ತೆ ಸಂಪಾದಿಸಬಹುದು, ಆದರೆ ಆರೋಗ್ಯ ಕಳೆದುಕೊಂಡರೆ ಬದುಕಿನ ಸಮತೋಲನವೇ ಕಳೆದುಹೋಗುತ್ತದೆ. ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಯೋಗವನ್ನು ಪ್ರತಿಯೊಬ್ಬರೂ ಜೀವನದ ಅವಿಭಾಜ್ಯ ಅಂಗವಾಗಿಸಿಕೊಳ್ಳಬೇಕು."
**– ಡಾ. ತೋಂಟದ ಸಿದ್ಧರಾಮ** ಮಹಾಸ್ವಾಮಿಗಳು

ಮಾರ್ಗ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಪ್ರಕಾಶ ಕರಿಸೋಮನಗೌಡರ ದಂಪತಿಗಳನ್ನು ಪೂಜ್ಯರು ಸನ್ಮಾನಿಸಿ ಗೌರವಿಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಕಾಶ ಕರಿಸೋಮನಗೌಡರ, ತೋಂಟದಾರ್ಯ ಮಠದಲ್ಲಿ ಪ್ರತೀ ಸೋಮವಾರ ನಡೆಯುವ ಶಿವಾನುಭವ ಕಾರ್ಯಕ್ರಮ ಅನೇಕ ಸಾಹಿತಿಗಳು, ಕಲಾವಿದರು ಹಾಗೂ ಪ್ರತಿಭಾವಂತರಿಗೆ ಪ್ರೋತ್ಸಾಹ ನೀಡುತ್ತಿರುವ ವಿಶಿಷ್ಟ ವೇದಿಕೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಅಂತಾರಾಷ್ಟ್ರೀಯ ಮಟ್ಟದ ಅಟ್ಯಾಪಾತ್ಯ ಕ್ರೀಡೆಯಲ್ಲಿ ಚಿನ್ನದ ಪದಕ ಗೆದ್ದ ಸಿಂಗಟರಾಯನಕೆರೆ ತಾಂಡಾದ ರಾಹುಲ ಶೇಖರ ಕಾರಭಾರಿ ಅವರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಶ್ರೀಮಠದಲ್ಲಿ ಒಂದು ವಾರಗಳ ಕಾಲ ಯೋಗ ತರಬೇತಿ ನೀಡಿದ ಬಸವ ಯೋಗ ಮಹಾವಿದ್ಯಾಲಯದ ಮುಖ್ಯಸ್ಥ ಕೆ.ಎಸ್. ಪಲ್ಲೇದ ಅವರನ್ನು ಗೌರವಿಸಲಾಯಿತು. ಕವಿವಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೂ ಸನ್ಮಾನ ನಡೆಯಿತು.

ಮೌನಯೋಗಿ ಡಾ. ವಿಶ್ವನಾಥ ಗುರುಗಳನ್ನು ಲಿಂಗಾಯತ ಪ್ರಗತಿಶೀಲ ಸಂಘದಿಂದ ಗೌರವಿಸಲಾಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ವಚನ ಸಂಗೀತ, ಅಪೇಕ್ಷಾ ಪಂಪಣ್ಣವರ ಧರ್ಮಗ್ರಂಥ ಪಠಣ, ಕುಮಾರಿ ಸಾತ್ವಿಕ ಪಂಪಣ್ಣವರ ವಚನಚಿಂತನೆ ಕಾರ್ಯಕ್ರಮ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಕೊಟ್ರೇಶ ಸಂಗಮೇಶ ಮೇಲ್ಮುರಿ ಹಾಗೂ ಕುಟುಂಬದವರು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ, ಶಿವಾನುಭವ ಸಮಿತಿ ಅಧ್ಯಕ್ಷ ರಮೇಶ ಕಲ್ಲನಗೌಡರ, ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಸಿದ್ಧರಾಮ ಪಟ್ಟೇದ, ಪ್ರತಿಭಾ ಬಡ್ನಿ, ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka